ಸಂಪುಟ : 4 ಸಂಚಿಕೆ : 01 ಪುಟ : 4 ಬೆಲೆ : ರೂ. 4 ಬುಧವಾರ, ಫೆಬ್ರುವರಿ, 08, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ



# ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 01 Pages : 4 Rate : 4 Rs Wednesday, February 08, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com



## ಭಯಂಕರ ಭೂಕಂಪಕ್ಕೆ ತತ್ತರಿಸಿದ ಟರ್ಕಿ: 4000 ಜನರು ಸಾವು

ಟರ್ಕಿ: ಟರ್ಕಿ ಹಾಗೂ ಸಿರಿಯಾದಲ್ಲಿ ಪ್ರಭಲ ಭೂಕಂಪ ಸಂಭವಿಸಿದ್ದು, 4000ಕ್ಕೂ ಹೆಚ್ಚು ಜನರು ಸಾವನ್ನಪ್ಪಿರುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

ಟರ್ಕಿಯ ನೂರ್ಡಗಿಯಿಂದ ಪೂರ್ವಕ್ಕೆ 23 ಕಿ.ಮೀ ದೂರದಲ್ಲಿ ಭೂಮಿ ಕಂಪಿಸಿದೆ. ನೋಡ ನೋಡುತ್ತಿದ್ದಂತೆಯೇ ಸಾವಿರಾರು ಕತ್ತಡಗಳು ನೆಲಸಮವಾಗಿವೆ. ರಿಕ್ಟರ್ ಮಾಪಕದಲ್ಲಿ ಭೂಕಂಪದ ತೀವ್ರತೆ 7.8ರಷ್ಟು ದಾಖಲಾಗಿದೆ.

ಸಾವಿರಾರು ಜನ ಅವಶೇಷಗಳಡಿ ಸಿಲುಕಿಕೊಂಡಿದ್ದಾರೆ. ಹಲವರು ನಾಪತ್ತೆಯಾಗಿದ್ದಾರೆ. ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಭೀತಿಯಿದೆ. ಟರ್ಕಿಯಲ್ಲಿ 7 ದಿನಗಳ ಕಾಲ ರಾಷ್ಟ್ರೀಯ ಶೋಕಾಚರಣೆ ಘೋಷಿಸಲಾಗಿದೆ.

ಟರ್ಕಿ ಹಾಗೂ ಸಿರಿಯಾದಲ್ಲಿ ಸಂಭವಿಸಿದ ಭೂಕಂಪದಲ್ಲಿ 4 ಸಾವಿರ ಜನರು ಸಾವನ್ನಪ್ಪಿದ್ದು, 15,000 ಜನರು ಗಾಯಗೊಂಡಿದ್ದಾರೆ. 10 ನಗರಗಳಲಿ 1700ಕ್ಕೂ ಹೆಚ್ಚು ಕಟ್ಟಡಗಳು ನಾಶವಾಗಿವೆ ಎಂದು ತಿಳಿದುಬಂದಿದೆ.

## ಬಿಬಿಎಂಪಿ ವ್ಯಾಪ್ತಿಯಲ್ಲಿ 108 ನಮ್ಮ ಕ್ಲಿನಿಕ್ ಗಳಿಗೆ ಸಿಎಂ ಬೊಮ್ಮಾಯಿ ಚಾಲನೆ



ಬೆಂಗಳೂರು: ಬಿಬಿಎಂಪಿ ವ್ಯಾಪ್ತಿಯಲ್ಲಿ 108 'ನಮ್ಮ ಕ್ಲಿನಿಕ್' ಗಳಿಗೆ ಮಂಗಳವಾರ ಚಾಲನೆ ದೊರೆಯಿತು. ಬಿಬಿಎಂಪಿ ಸಹಯೋಗದಲ್ಲಿ ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ರಾಣಿ ಅಬ್ಬಕ್ಕ ಆಟದ ಮೈದಾನದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ "ನಮ್ಮ ಕ್ಲಿನಿಕ್" ಉದ್ಘಾಟಿಸಿದರು. ಆರೋಗ್ಯ ಸಚಿವ ಡಾ. ಕೆ. ಸುಧಾಕರ್, ಅಬಕಾರಿ ಸಚಿವ ಗೋಪಾಲಯ್ಯ ಮತ್ತಿತರರು ಉಪಸ್ಥಿತರಿದ್ದರು.

ನಂತರ ಮಾತನಾಡಿದ ಮುಖ್ಯಮಂತ್ರಿ, "ಬಡವರಿಗೆ ಅತ್ಯಂತ ಕಡಿಮೆ ದರದಲ್ಲಿ ಉತ್ತಮ ವೈದ್ಯಕೀಯ ಸೌಲಭ್ಯ ನೀಡುವ ಸಲುವಾಗಿ ಸರ್ಕಾರ 108 "ನಮ್ಮ ಕ್ಲಿನಿಕ್" ಗಳನ್ನು ಆರಂಭಿಸಿದೆ.

ಬರುವ ದಿನಗಳಲ್ಲಿ ನಮ್ಮ ಕ್ಲಿನಿಕ್ ಗಳ ಸಂಖ್ಯೆಗಳನ್ನು ಹೆಚ್ಚಿಸಲಾಗುವುದು, ಎಲ್ಲರಿಗೂ ಆರೋಗ್ಯ ಎಲ್ಲೆಡೆಯೂ ಆರೋಗ್ಯ"ಎಂಬುದು ನಮ್ಮ ಸರ್ಕಾರದ ಸಂಕಲ್ಪವಾಗಿದೆ ಎಂದರು.

ಆರೋಗ್ಯ ಸಚಿವ ಡಾ. ಕೆ. ಸುಧಾಕರ್ ಮಾತನಾಡಿ, ರಾಜ್ಯಾದ್ಯಂತ ನಗರ ಪ್ರದೇಶಗಳಲ್ಲಿ ರೂ. 150 ಕೋಟಿ ವೆಚ್ಚದಲ್ಲಿ 438 ನಮ್ಮ ಕ್ಲಿನಿಕ್ ಸ್ಥಾಪಿಸಲಾಗುತ್ತಿದ್ದು, ಬೆಂಗಳೂರಿನಲ್ಲಿ ಒಟ್ಟು 243 ನಮ್ಮ ಕ್ಲಿನಿಕ್‌ಗಳು ಸ್ಥಾಪನೆಗೊಳ್ಳುತ್ತಿವೆ.

ಈಗಾಗಲೇ ರಾಜ್ಯಾದ್ಯಂತ 100 ನಮ್ಮ ಕ್ಲಿನಿಕ್ ಗಳಿಗೆ ಚಾಲನೆ ದೊರೆತಿದ್ದು, ಇಂದು ಬೆಂಗಳೂರಿನಲ್ಲಿ 108 ನಮ್ಮ ಕ್ಲಿನಿಕ್‌ಗಳಿಗೆ ಚಾಲನೆ ದೊರೆತಿದೆ ಎಂದು ತಿಳಿಸಿದರು.

ನಗರ ಪ್ರದೇಶದಲ್ಲಿ 50-60 ಸಾವಿರ ಜನಸಂಖ್ಯೆಗೆ ಒಂದರಂತೆ ಕ್ಲಿನಿಕ್‌ಗಳು ಕಾರ್ಯ ನಿರ್ವಹಿಸುತ್ತಿದ್ದವು. ಆದರೆ ಈಗ, 'ನಮ್ಮ ಕ್ಲಿನಿಕ್' ಯೋಜನೆಯಿಂದಾಗಿ 15-20 ಸಾವಿರ ಜನಸಂಖ್ಯೆಗೆ ಒಂದರಂತೆ ಕ್ಲಿನಿಕ್‌ಗಳನ್ನು ಸ್ಥಾಪಿಸಲಾಗುತ್ತಿದೆ.ಜನಪರವಾದ ಆಡಳಿತವೇ ನಮ್ಮ ಸರ್ಕಾರದ ಗುರಿ ಎಂದರು.

ನಂತರ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಡಾ. ಕೆ. ಸುಧಾಕರ್, ನಮ್ಮ ಕ್ಲಿನಿಕ್ ಗೆ ಭೇಟಿ ನೀಡಿ, ಸಲಕರಣೆಗಳು, ಸೌಲಭ್ಯಗಳನ್ನು ವೀಕ್ಷಿಸಿದರು. ವೈದ್ಯರಿಂದ ಮಾಹಿತಿ ಪಡೆದುಕೊಂಡು ಅಗತ್ಯ, ಸಲಹೆ, ಸೂಚನೆಗಳನ್ನು ನೀಡಿದರು.

## ಜಾತಿಯವಾಸನೆ; ಕುಮಾರಸ್ವಾಮಿಯವರ ಬಾಯಿಯಲ್ಲಿ ಶೋಭೆಯಲ್ಲ: ಸಂಜಯ ಪಾಟೀಲ



ಬೆಳಗಾವಿ: ಪ್ರಜಾಪ್ರಭುತ್ವದ ಅಡಿಯಲ್ಲಿ 2 ಬಾರಿ ಮುಖ್ಯಮಂತ್ರಿಗಳಾಗಿ ರಾಜ್ಯವನ್ನಾಳಿದ ಕುಮಾರಸ್ವಾಮಿಯವರ ಬಾಯಿಯಲ್ಲಿ ಜಾತಿಯವಾಸನೆ ಅವರಿಗೆ ಶೋಭೆ ತರುವಂತದ್ದಲ್ಲ ಎಂದು ಬೆಳಗಾವಿ ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಸಂಜಯ ಪಾಟೀಲ ಅಕ್ರೋಶ ವ್ಯಕ್ತಪಡಿಸಿದ್ದಾರೆ.

ಮಂಗಳವಾರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ ಅವರು, ಜಾತಿ ಮತ ಪಂಥ ಬಡವ ಬಲ್ಲಿದ ಎಂಬವದನ್ನು ಮೀರಿ ಜನಸಾಮಾನ್ಯರ ಸೇವೆ ಮಾಡುವ ಮೂಲಕ ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿಯವರು ಬಿಜೆಪಿಯಲ್ಲಿ ಅಗ್ರ ನಾಯಕರ ಪಂಕ್ತಿಯಲ್ಲಿ ಇದ್ದಾರೆ ಇದನ್ನು ಸಹಿಸದೆ ಹಾಗೂ ಸೋಲಿನ ಭಯದಲ್ಲಿ ಹತಾಷರಾಗಿ ಜಾತಿಯನ್ನು ವಿನಕಾರಣ ರಾಜಕೀಯದಲ್ಲಿ ಏಳೆದು ತಂದಿದ್ದಾರೆ.

ರಾಜಕಾರಣದಲ್ಲಿ ಟೀಕೆಗಳು ಸಾಮಾನ್ಯ ಆದರೆ ಜಾತಿಗಳನ್ನು ನಿಂದಿಸುವದು ರಾಜಕಾರಣಕ್ಕೆ ಬಳಸಿಕೊಳ್ಳುವದು ಸರಿಯಾದ ಮಾರ್ಗವಲ್ಲ. ಜನಪ್ರತಿನಿಧಿಗಳು ಆದವರು ಇವುಗಳನೆಲ್ಲ ಮೀರಿ ಬೆಳೆಯಬೇಕು.

ಅಭಿವ್ಯಕ್ತಿ ಸ್ವಾತಂತ್ರ್ಯ ಇದೆಯೆಂದು ಬಾಯಿ ಚಪಲಕ್ಕಾಗಿ ಇನ್ನೊಬ್ಬರನ್ನ ತೃಪ್ತಿ ಪಡಿಸುವ ಉದ್ದೇಶಕ್ಕಾಗಿ ಜಾತಿಯ ಹೆಸರಿನಲ್ಲಿ ಮಾತನಾಡವದು ಸರಿಯಲ್ಲ.

ಒಂದು ಅಧಿಕಾರ ಅನುಭವಿಸಿದ ವ್ಯಕ್ತಿಗಳೆ ಇಂತಹ ಕಿಳುಮಟ್ಟಕ್ಕೆ ಇಳಿಯಬಾರದು. ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಮೋದಿಜಿಯವರ ಜೋತೆಯಲ್ಲಿ ಉತ್ತಮ ಬಾಂಧವ್ಯ ಹೊಂದುವದರೊಂದಿಗೆ ಬಿಜೆಪಿಯಲ್ಲಿ ಪ್ರಭಾವ ಸಚಿವರಾಗಿ ರಾಜ್ಯಕ್ಕೆ ಬರುವ ಎಲ್ಲ ಯೋಜನೆ ಸೌಲಭ್ಯಗಳನ್ನು ತರುವಲ್ಲಿ ಯಶಸ್ವಿಯಾಗಿದ್ದಾರೆ. ಅಂತವರನ್ನ ಬ್ರಾಹ್ಮಣ ಜಾತಿಗೆ ಸೀಮಿತಗೊಳಿಸಿ ಮಾತನಾಡಿರುವ ಮಾಜಿ ಮುಖ್ಯಮಂತ್ರಿ ಕುಮಾರ ಸ್ವಾಮಿಗಳು ಹೇಳಿಯನ್ನು ಉಗ್ರವಾಗಿ ಖಂಡಿಸುತ್ತೆವೆ.

ಅವರು ಕೂಡಲೆ ಆಡಿರುವ ಶಬ್ದಗಳನ್ನು ಹಿಂದಕ್ಕೆ ಪಡೆಯಬೇಕು ಮತ್ತು ಕ್ಷಮೆಯಾಚಿಸಬೇಕು ಇಲ್ಲದಿದ್ದರೆ ಬರುವ ದಿನಗಳಲ್ಲಿ ಉಗ್ರ ಹೋರಾಟ ನಡೆಸಬೇಕಾದಿತು ಎಂದು ಎಚ್ಚರಿಸಿದ್ದಾರೆ. ಈ ಸಂದರ್ಭದಲ್ಲಿ ಜಿಲ್ಲಾ ಖಜಾಂಚಿ ಮಲ್ಲಿಕಾರ್ಜುನ ಮಾದಮ್ಮನವರ ಮಾಧ್ಯಮ ಸಂಚಾಲಕ ಎಫ್.ಎಸ್.ಸಿದ್ದನಗೌಡರ ಜಿಲ್ಲಾ ವಕ್ತಾರ ಸಂಜಯ ಕಂಚಿ, ಜಿಲ್ಲಾ ಸಾಮಾಜಿಕ ಜಾಲತಾಣ ಸಂಚಾಲಕ ನೀತಿನ ಚೌಗಲೆ, ವೀರಭದ್ರಯ್ಯ ಪುಜಾರ ಇದ್ದರು.

## ಯಡಿಯೂರಪ್ಪ ಪುತ್ರನಿಗೆ ಸ್ಥಾನ ನೀಡುವುದನ್ನು ತಪ್ಪಿಸಲು ಬೊಮ್ಮಾಯಿ ಸಚಿವ ಸಂಪುಟ ವಿಸ್ತರಣೆ ಮಾಡುತ್ತಿಲ್ಲ: ಸಿದ್ದರಾಮಯ್ಯ



ಬೆಂಗಳೂರು: ಬಿಜೆಪಿ ಪ್ರಬಲ ನಾಯಕ ಬಿ.ಎಸ್. ಯಡಿಯೂರಪ್ಪ ಅವರ ಪುತ್ರನನ್ನು ಸಚಿವರನ್ನಾಗಿ ಮಾಡುವುದನ್ನು ತಪ್ಪಿಸುವ ಸಲುವಾಗಿಯೇ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಸಚಿವ ಸಂಪುಟ ವಿಸ್ತರಣೆ ಮಾಡುತ್ತಿಲ್ಲ ಎಂದು ಕಾಂಗ್ರೆಸ್ ಹಿರಿಯ ನಾಯಕ ಸಿದ್ದರಾಮಯ್ಯ ಸೋಮವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದಷ್ಟೇ ಅಲ್ಲದೆ ಸಂಪುಟ ವಿಸ್ತರಣೆ ಮಾಡದಿರಲು ಹಾಗೂ ತಮ್ಮ ಬಳಿಯೇ ಹಲವು ಖಾತೆಗಳನ್ನು ಇಟ್ಟುಕೊಂಡಿರುವುದಕ್ಕೆ ಹೆಚ್ಚೆಚ್ಚು ಲಂಚ ಸ್ವೀಕಾರ ನಡೆಯುತ್ತಿರುವುದು ಕೂಡ ಒಂದು ಕಾರಣವಾಗಿದೆ. ಯಡಿಯೂರಪ್ಪ ಅವರಿಗೆ ಬಿಜೆಪಿ ಅನ್ಯಾಯ ಮಾಡಿದೆ, ಆರ್‌ಎಸ್‌ಎಸ್‌ನೊಂದಿಗೆ ಸೇರಿ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿ ಬಸವರಾಜ ಬೊಮ್ಮಾಯಿ ಅವರನ್ನು ಕರೆತಂದರು ಎಂದು ಹೇಳಿದ್ದಾರೆ.

ಸಚಿವ ಸಂಪುಟ ವಿಸ್ತರಣೆ ಮಾಡದ ಕಾರಣ ಯಡಿಯೂರಪ್ಪ ಪುತ್ರನಿಗೆ ಸಚಿವ ಸ್ಥಾನ ನೀಡುವುದನ್ನು ತಪ್ಪಿಸಲು ಬೊಮ್ಮಾಯಿಯವರು ಸಚಿವ ಸಂಪುಟ ವಿಸ್ತರಣೆ ಮಾಡುತ್ತಿಲ್ಲ. ಹೀಗಾಗಿಯೇ ಯಡಿಯೂರಪ್ಪ ಹಾಗೂ ಬೊಮ್ಮಾಯಿ ನಡುವೆ ಭಿನ್ನಾಭಿಪ್ರಾಯ ಉಂಟಾಗಿದೆ. ಸಂಪುಟ ವಿಸ್ತರಣೆ ಮಾಡದೆ, ಮುಖ್ಯಮಂತ್ರಿಗಳು ತಮ್ಮ ಬಳಿಯೇ ಹಲವು ಖಾತೆಗಳನ್ನು ಇಟ್ಟುಕೊಂಡು ಸುಮಾರು ಒಂದೂವರೆ ವರ್ಷಕ್ಕೂ ಹೆಚ್ಚು ಸಮಯವಾಗಿದೆ. ಆದರೂ, ಸಂಪುಟ ವಿಸ್ತರಣೆ ಮಾಡುತ್ತಿಲ್ಲ. ಬೊಮ್ಮಾಯಿ ಅವರ ಬಳಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ (RDPR), ಬೆಂಗಳೂರು ನಗರಾಭಿವೃದ್ಧಿ ಮತ್ತು ಹಣಕಾಸು ಸೇರಿದಂತೆ ಸುಮಾರು ಎಂಟು ಖಾತೆಗಳಿವೆ. ಬಹುತೇಕ ನಾಲ್ಕನೇ ಒಂದು ಭಾಗದಷ್ಟು ಖಾತೆಗಳು ಮುಖ್ಯಮಂತ್ರಿಯವರ ಬಳಿ ಇವೆ ಎಂದು ತಿಳಿಸಿದರು.

ಈ ಹಿಂದೆ ಹಲವು ಬಾರಿ ಸುದ್ದಿಗಾರರೊಂದಿಗೆ ಮಾತನಾಡಿದ್ದ ಮುಖ್ಯಮಂತ್ರಿ ಬೊಮ್ಮಾಯಿಯವರು, ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದಂತೆ ಪಕ್ಷದ ಹೈಕಮಾಂಡ್ ಜತೆ ಚರ್ಚೆ ನಡೆಸಲಾಗಿದ್ದು, ಅವರಿಂದ ಅನುಮತಿ ದೊರೆತ ಕೂಡಲೇ ಸಂಪುಟ ವಿಸ್ತರಣೆ ಮಾಡುವುದಾಗಿ ಹೇಳಿದ್ದರು.

ಆದರೆ, ಈ ವರೆಗೂ ಅಂತಹ ಯಾವುದೇ ಕಸರತ್ತುಗಳನ್ನೂ ನಡೆಸಲಾಗಿಲ್ಲ. ಮೇ ವೇಳೆಗೆ ರಾಜ್ಯದಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆ.

## ಯಲ್ಲಮ್ಮನ ಮತಕ್ಷೇತ್ರದಲ್ಲಿ ಬಿಜೆಪಿ ಗೆಲ್ಲಿಸಲು ಪಣ



ಮುನವಳ್ಳಿ: ಸವದತ್ತಿ ಯಲ್ಲಮ್ಮನ ಮತಕ್ಷೇತ್ರದ ಬಿಜೆಪಿ ಕಾರ್ಯಕರ್ತರು ಬಿಜೆಪಿ ಅಭರ್ಥಿಯನ್ನು ಗೆಲ್ಲಿಸಲು ಪಣ ತೊಟ್ಟಿದ್ದಾರೆ ಎಂದು ಜಿಲ್ಲಾ ಬಿಜೆಪಿ ಮಾಧ್ಯಮ ಸಂಚಾಲಕ ಎಫ್.ಎಸ್.ಸಿದ್ದನಗೌಡರ ಹೇಳಿದರು.

ಪಟ್ಟಣದ ಕಾಳಿಕಾ ದೇವಸ್ಥಾನಲ್ಲಿ ಮಂಗಳವಾರ ಮುನವಳ್ಳಿ ಮತ್ತು ಶಿಂಧೋಗಿ ಮಾಹಾಶಕ್ತಿ ಕೇಂದ್ರಗಳ ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿ ಬಿಜೆಪಿ ಪಕ್ಷಕ್ಕೆ ಕಾರ್ಯಕರ್ತರೆ ಜೀವಾಳವಾಗಿದ್ದು ಯಲ್ಲಮ್ಮನ ಮತಕ್ಷೇತ್ರದಲ್ಲಿ ಬಿಜೆಪಿ ಬಲಿಷ್ಠವಾಗಿದ್ದು ಆಕಾಂಕ್ಷಿಗಳ ಪಟ್ಟಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಕಾರ್ಯಕರ್ತರು ಮಾತ್ರ ವ್ಯಕ್ತಿ ಪೂಜೆಗೆ ಅಂಟಿಕೊಳ್ಳದೆ ಪಕ್ಷದ ಗೆಲುವಿಗೆ ಶ್ರಮಿಸುತಿದ್ದಾರೆ. ಮನೆ ಮನೆಗೆ ಕರ ಪತ್ರ ವಿತರಣೆ, ಮನೆ ಮೇಲೆ ಬಿಜೆಪಿ ಧ್ವಜ ಕಟ್ಟುವದು ವಾಹನ ಮತ್ತು ಮನೆಗಳ ಬಾಗಿಲಗಳಿಗೆ ಸ್ಟೀಕರ್ ಅಂಟಿಸುವ ಕಾರ್ಯವನ್ನು ಅತ್ಯಂತ ಯಶಸ್ವಿಯಾಗಿಸಿದ್ದಾರೆ. ಯುವಕರು ಬಿಜೆಪಿಯತ್ತ ಸಮರೋಪಾದಿಯಲ್ಲಿ ಬರುತಿದ್ದು ಕ್ಷೇತ್ರದಲ್ಲಿ ಬಿಜೆಪಿ ಗೆಲವು ನಿಶ್ಚಿತವಾಗಿದ್ದು ಚುನಾವಣೆಯ ವರೆಗೂ ವಿಶ್ರಮಿಸದೆ ಬಿಜೆಪಿ ಗೆಲುವಿಗೆ ಶ್ರಮಿಸಬೇಕು ಎಂದರು.

ಮಂಡಲ ಅಧ್ಯಕ್ಷ ಈರಣ್ಣ ಚಂದರಗಿ ಮಾತನಾಡಿ, ಪಕ್ಷ ನೀಡುವ ಎಲ್ಲ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುತ್ತಿರುವ ಕಾರ್ಯಕರ್ತರ ಶ್ರಮ ಶ್ಲಾಘನೀಯ ಎಂದರು.

ವಿಸ್ತಾರಕ ಶಂಕರಗೌಡ ಪಾಟೀಲ ಮಾತನಾಡಿ, ಬಿಜೆಪಿ ಶಿಸ್ತು ಬದ್ದ ಪಾರ್ಟಿಯಾಗಿದ್ದು ಎಲ್ಲ ಆಕಾಂಕ್ಷಿಗಳು ಪಕ್ಷದ ಅಡಿಯಲ್ಲಿ ಕಾರ್ಯ ನಿರ್ವಹಿಸಬೇಕು. ಪಕ್ಷ ಎಲ್ಲವನ್ನು ಗಮನಿಸುತಿದ್ದು ಅಶಿಸ್ತು ತೋರುವವರಿಗೆ ಶಿಸ್ತು ಕ್ರಮ ಶತಸಿದ್ದ ಕಾರ್ಯಕರ್ತರು ಪಕ್ಷದಲ್ಲಿ ಶಿಸ್ತಿನ ಸಿಪಾಯಿಗಳಂತೆ ಕಾರ್ಯ ನಿರ್ವಹಿಸಬೇಕೆಂದರು.

ವೇದಿಕೆಯ ಮೇಲೆ ರತ್ನಾ ಮಾಮನಿ, ಯರಗಟ್ಟಿ ಮಾಜಿ ಜಿಪಂ ಸದಸ್ಯ ಅಜೀತ ದೇಸಾಯಿ,ಮಲ್ಲೇಶ ಸುಳೇಬಾವಿ,

ವಿನೋದ ಬುರ್ಜಿ, ಶ್ರೀಕರ ಗೋಕಾವಿ, ಸುನಿಲ ಮಾಮನಿ, ಈರಣ್ಣ ವೀರಶೆಟ್ಟಿ, ಅಶೋಕ ಪಾಟೀಲ, ಪ್ರಕಾಶ ನಲವಡೆ, ಶ್ರೀಕಾಂತ್ ಮಲಗೌಡರ, ಬಸವರಾಜ ಶಿಗ್ಗಾಂವಿ, ಅಶೋಕ ಗೋಮಾಡಿ, ಮಹಾಂತೇಶ ಗೊಕಾಕ, ಮಕ್ತುಂ ಗಡಾದ ಮುಂತಾದವರು ಇದ್ದರು.

## ಸಿಎಂ ತವರು ಕ್ಷೇತ್ರದಲ್ಲೇ ಶಾಲಾ ಮಕ್ಕಳ ಪ್ರತಿಭಟನೆ: ರಸ್ತೆಯಲ್ಲೇ ಕುಳಿತು ಧರಣಿ



ಹಾವೇರಿ: ಸಿಎಂ ಬಸವರಾಜ್ ಬೊಮ್ಮಾಯಿ ಅವರ ತವರು ಕ್ಷೇತ್ರ ಹಾವೇರಿಯಲ್ಲಿ ಶಾಲಾ ಮಕ್ಕಳು ಪ್ರತಿಭಟನೆ ನಡೆಸಿದ್ದು, ಶಾಲೆಗೆ ಹೋಗಲು ದಾರಿ ಬಿಡಿ ಎಂದು ರಸ್ತೆಯಲ್ಲಿಯೇ ಕುಳಿತು ಧರಣಿ ನಡೆಸಿದ್ದಾರೆ.

ಕಲಾಂದರ ಭಬ್ಬಿ ಎಂಬುವವರು ಶಾಲೆಗೆ ಹೋಗುವ ದಾರಿಯನ್ನು ಒತ್ತುವರಿ ಮಾಡಿಕೊಂಡು ಇಟ್ಟಿಗೆಗಳನ್ನು ಇಟ್ಟು ದಾರಿ ಬಂದ್ ಮಾಡಿದ್ದು, ವಿದ್ಯಾರ್ಥಿಗಳು ಶಾಲೆಗೆ ಹೋಗಲು ದಾರಿಯಿಲ್ಲದಂತಾಗಿದೆ. ಇದರಿಂದ ಬೇಸತ್ತ ವಿದ್ಯಾರ್ಥಿಗಳು ಇಂದು ಸ್ಥಳದಲ್ಲಿ ಪ್ರತಿಭಟನೆ ನಡೆಸಿದ್ದು, ಶಾಲೆಗೆ ಹೋಗಲು ದಾರಿ ಮಾಡಿಕೊಡುವಂತೆ ಆಗ್ರಹಿಸಿದ್ದಾರೆ. ಸ್ಥಳಕ್ಕೆ ತಹಶ್ಲೀಲ್ದಾರ್ ಹಾಗೂ ಶಿಕ್ಷಣಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಸರ್ಕಾರಿ ಮಾದರಿ ಗಂಡುಮಕ್ಕಳ ಶಾಲೆ ಹಾಗೂ ಸರ್ಕಾರಿ ಮಾದರಿ ಹೆಣ್ಣುಮಕ್ಕಳ ಶಾಲೆ ಎರಡು ಪ್ರತ್ಯೇಕ ಶಾಲೆಗಳಿಗೆ ತೆರಳಲು ಒಂದೇ ರಸ್ತೆಯನ್ನು ನಿರ್ಮಿಸಲಾಗಿತ್ತು. ಆದರೆ ಈಗ ಆ ರಸ್ತೆಯನ್ನು ಒತ್ತುವರಿ ಮಾಡಿಕೊಂಡು ರಸ್ತೆಯನ್ನೇ ಬಂದ್ ಮಾಡಲಾಗಿದೆ. ಇದರಿಂದ ನೂರಾರು ವಿದ್ಯಾರ್ಥಿಗಳು ಇಂದು ರಸ್ತೆಯಲ್ಲಿಯೇ ಕುಳಿತು ಪ್ರತಿಭಟನೆ ನಡೆಸಿದ್ದಾರೆ.

## ಯಶವಂತಪುರದಲ್ಲಿ ಜೆಡಿಎಸ್ ಅಭ್ಯರ್ಥಿ ಜವರಾಯಿಗೌಡ ಗೆಲ್ಲದಿದ್ದರೆ ರಾಜಕೀಯ ನಿವೃತ್ತಿ: ಎಚ್.ಡಿ.ಕೆ



ಕೆಂಗೇರಿ: ಯಶವಂತಪುರ ಕ್ಷೇತ್ರದಿಂದ ಪಕ್ಷದ ಜೆಡಿಎಸ್ ಅಭ್ಯರ್ಥಿ ಗೆಲ್ಲಲು ವಿಫಲವಾದಲ್ಲಿ ರಾಜಕೀಯದಿಂದ ನಿವೃತ್ತಿ ಪಡೆಯುವೆ ಎಂದು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಘೋಷಿಸಿದ್ದಾರೆ.

ಯಶವಂತಪುರ ಕಾರ್ಯಕರ್ತರ ಸಭೆಯಲ್ಲಿ ಜವರಾಯಿಗೌಡ ಅವರನ್ನು ಕ್ಷೇತ್ರದ ಅಭ್ಯರ್ಥಿಯಾಗಿ ಘೋಷಿಸಿ ಅವರು ಮಾತನಾಡಿದ ಅವರು, ಕಳೆದ ಮೂರು ಚುನಾವಣೆಗಳಲ್ಲಿ ಜವರಾಯಿಗೌಡ ಕಡಿಮೆ ಅಂತರದಲ್ಲಿ ಸೋತಿದ್ದಾರೆ. ಕ್ಷೇತ್ರದ ಮತದಾರರ ಅನುಕಂಪ ಅವರ ಮೇಲಿದೆ. ಈ ಬಾರಿ ಜನರು ಅವರನ್ನು ಕೈ ಹಿಡಿಯಲಿದ್ದಾರೆ. ವೈಯಕ್ತಿಕವಾಗಿ ಬೆಂಬಲ ನೀಡುವ ಅವರನ್ನು ಜಯಶೀಲರನ್ನಾಗಿ ಮಾಡಿಯೇ ತೀರುವೆ ಎಂದು ಹೇಳಿದರು.

ತ್ಯಾಜ್ಯ ವಿಲೇವಾರಿ ದೊಡ್ಡ ಮಾಫಿಯವಾಗಿದೆ. ತ್ಯಾಜ್ಯ ಸಂಸ್ಕರಣೆಗೆ ಹಲವಾರು ನೂತನ ವಿಧಾನಗಳಿವೆ. ಸರ್ಕಾರ ಈ ಬಗ್ಗೆ ಬದ್ಧತೆ ತೋರುತ್ತಿಲ್ಲ. 8 ಸಾವಿರ ಕೋಟಿ ಖರ್ಚಾದರೂ ಬೆಂಗಳೂರಿನಲ್ಲಿ ಗುಂಡಿಗಳ ಸಂಖ್ಯೆ ಕಡಿಮೆಯಾಗಿಲ್ಲ ಎಂದು ಅವರು ದೂರಿದರು.

ಕಾಂಗ್ರೆಸ್- ಬಿಜೆಪಿ ಒಳ ಮೈತ್ರಿಯಿಂದ ಕಳೆದ ಉಪಚುನಾವಣೆಯಲ್ಲಿ ಪಕ್ಷಕ್ಕೆ ಹಿನ್ನಡೆಯಾಯಿತು ಎಂದು ಅವರು ತಿಳಿಸಿದರು. ಯಶವಂತಪುರ ವಿಧಾನಸಭಾ ಕ್ಷೇತ್ರದ ಆಕಾಂಕ್ಷಿ ನಾನಲ್ಲ. ಜನಸೇವೆ ಮಾಡಲು ಅಧಿಕಾರವೊಂದೇ ಮಾರ್ಗವಲ್ಲ' ಎಂದು ಜೆಡಿಎಸ್ ಮುಖಂಡ ಜವರಾಯಿಗೌಡ ಅವರು ಹೇಳಿದರು.

ಕುಮಾರಸ್ವಾಮಿ ಅವರೇ ಯಶವಂತಪುರ ಕ್ಷೇತ್ರದಿಂದ ಸ್ಪರ್ಧೆ ಮಾಡಬೇಕು. ಕಳೆದ ಮೂರು ಬಾರಿ ನಡೆದ ಚುನಾವಣೆಯಲ್ಲೂ ಜೆಡಿಎಸ್ ಎರಡನೇ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಈ ಬಾರಿ ನೀವೇ ಸ್ಪರ್ಧಿಸಿದರೆ ಕಾರ್ಯ ಕರ್ತರ ವಿಶ್ವಾಸ ಇಮ್ಮಡಿಗೊಳ್ಳಲಿದೆ' ಎಂದು ಕಾರ್ಯಕರ್ತರು ಒತ್ತಾಯಿಸಿದರು.

ನಿಷ್ಠಾವಂತ ಕಾರ್ಯಕರ್ತರು ಇಲ್ಲಿ ಇದ್ದಾರೆ. ಯಶವಂತಪುರದಲ್ಲಿ 2013 ರಲ್ಲಿ ಅಭ್ಯರ್ಥಿ ಆದರು. 2013 ರಲ್ಲಿ 15 ಸಾವಿರದಲ್ಲಿ ಸೋತಿದ್ದೇವೆ. ಶೋಭಾ ಕರಂದ್ಲಾಜೆ ರಾಜಾಜಿನಗರದಲ್ಲಿ ಅಭ್ಯರ್ಥಿ ಆದರು. ಬಿಜೆಪಿ ಅಂದು 30 ಸಾವಿರ ಮತ ಪಡೆದಿದ್ದರೆ, ಜವರಾಯಿಗೌಡ ಶಾಸಕರಾಗುತ್ತಿದ್ದರು.

2018 ರಲ್ಲಿ ಮುಸಲ್ಮಾನ ಬಂಧುಗಳಿಂದ ದೋಷ ಆಯ್ತು. ಅದಕ್ಕೆ ಕಾರಣ ಕಾಂಗ್ರೆಸ್ ನವರು. ಬಿಜೆಪಿ ಬಿ ಟೀಂ ಅಂತ ಹೇಳಿ ದಾರಿ ತಪ್ಪಿಸಿದ್ರು. ಇಡೀ ರಾಜ್ಯದಲ್ಲಿ ಅಪ ನಂಬಿಕೆ ಮೂಡಿಸಿದರು. ಹಾಗಾಗಿ ಕಡಿಮೆ ಅಂತರದಲ್ಲಿ ಸೋತರು. ಉಪ ಚುನಾವಣೆ ವೇಳೆ ಕಾಂಗ್ರೆಸ್ ಬಿಜೆಪಿ ಸೇರಿ ಮಾಡಿದ ಚುನಾವಣೆ ಅದು. ಸೋಮಶೇಖರ್ ಅವರಿಗೇ ಕಾಂಗ್ರೆಸ್ ಅವರು ಮತ ಹಾಕಿದ್ರು. ಈ ಕ್ಷೇತ್ರ ಇಂದಿಗೂ ಜೆಡಿಎಸ್ ನ ಭದ್ರಕೋಟೆ ಎಂದರು.

## ಜನರ ಮೇಲೆ ಹಾಯ್ದ ಬಿಜೆಪಿ ಶಾಸಕನ ಸಂಬಂಧಿ ಕಾರು: ಇಬ್ಬರ ಸಾವು, ನಾಲ್ವರಿಗೆ ಗಾಯ



ಬೆಂಗಳೂರು: ಬಿಜೆಪಿ ಶಾಸಕರೊಬ್ಬರ ಸಂಬಂಧಿಗೆ ಸೇರಿದ ಖಾಸಗಿ ಹಲವು ವಾಹನಗಳಿಗೆ ಡಿಕ್ಕಿ ಹೊಡೆದು ಜನರ ಮೇಲೆ ಹಾಯ್ದ ಪರಿಣಾಮ ಇಬ್ಬರು ಮೃತಪಟ್ಟಿದ್ದು ನಾಲ್ವರು ಗಂಭೀರ ಗಾಯಗೊಂಡಿದ್ದಾರೆ.

ಬೆಂಗಳೂರಿನ ನೃಪತುಂಗ ರಸ್ತೆಯ ಕೋರ್ಟ್ ಕಾಂಪ್ಲೆಕ್ಸ್ ಜಂಕ್ಷನ್ ಬಳಿ ಈ ಘಟನೆ ಸಂಭವಿಸಿದೆ.

ಬಿಜೆಪಿ ಶಾಸಕ ಎಚ್ ಹಾಲಪ್ಪ ಅವರ ಅಳಿಯನ ಹೆಸರಿನಲ್ಲಿ ನೋಂದಣಿಯಾದ ಖಾಸಗಿ ವಾಹನ ನಿಯಂತ್ರಣ ತಪ್ಪಿ ಹಲವು ವಾಹನಗಳಿಗೆ ಢಿಕ್ಕಿ ಹೊಡೆಯಿತು. ಇದೇ ವೇಳೆ ಅಲ್ಲಿದ್ದ ಜನರ ಮೇಲೂ ಹಾಯ್ದ ಪರಿಣಾಮ ಇಬ್ಬರು ಸಾವನ್ನಪ್ಪಿದ್ದು, ನಾಲ್ವರು ಗಾಯಗೊಂಡಿದ್ದಾರೆ.

ಆಟೋಮೊಬೈಲ್ ಬಿಡಿಭಾಗಗಳ ವ್ಯಾಪಾರಿ ಮಜೀದ್ ಖಾನ್ (36) ಮತ್ತು ಪಾರ್ಕಿಂಗ್ ಲಾಟ್ ಮ್ಯಾನೇಜರ್ ಅಯ್ಯಪ್ಪ (60) ಎಂದು ಗುರುತಿಸಲಾಗಿದೆ. ಗಾಯಾಳುಗಳು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅಪಘಾತದ ಪರಿಣಾಮ ಕಾರಿನ ಮುಂಭಾಗ ಮತ್ತು ಹಿಂಭಾಗ ಜಖಂಗೊಂಡಿದೆ.

ಕಾರು ಹಾಲಪ್ಪ ಅವರದ್ದಲ್ಲ, ಆದರೆ ಅವರ ಕುಟುಂಬ ಸದಸ್ಯರಿಗೆ ಸೇರಿದ್ದು, ಅದು ಇನ್ನೂ ಎಂಎಲ್ಎ ಪಾಸ್ ಹೊಂದಿದೆ. ಅಪಘಾತದಿಂದ ಅನೇಕ ಜನರು ರಸ್ತೆಯಲ್ಲಿ ಬಿದ್ದಿರುವುದನ್ನು ರಸ್ತೆಯಲ್ಲಿ ಸಂಚರಿಸುತ್ತಿದ್ದವರು ಘಟನೆಯ ವಿಡಿಯೋ ಚಿತ್ರೀಕರಣ ಮಾಡಿದ್ದಾರೆ.

ವಾಹನದ ಚಾಲಕನನ್ನು ಬಂಧಿಸಲಾಗಿದ್ದು, ಹಾಲಪ್ಪ ಅವರ ಮಗಳನ್ನು ಕರೆತರಲು ತೆರಳಿದ್ದರು ಎನ್ನಲಾಗಿದೆ. ಚಾಲಕ ಗಡಿಬಿಡಿಯಲ್ಲಿ ಆಕಸ್ಮಿಕವಾಗಿ ಬ್ರೇಕ್ ಬದಲು ಎಕ್ಸಲರೇಟರ್ ಒತ್ತಿದ ಎಂದು ಪೊಲೀಸರಿಗೆ ತಿಳಿಸಿದ್ದಾರೆ.

## ಮಹಾ ಶಾಸಕಾಂಗ ಪಕ್ಷದ ನಾಯಕ ಬಾಳಾಸಾಹೇಬ್ ಥೋರಟ್ ರಾಜೀನಾಮೆ



ಮುಂಬೈ: ಮಹಾರಾಷ್ಟ್ರ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಬಾಳಾಸಾಹೇಬ್ ಥೋರಟ್ ಮಂಗಳವಾರ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ರಾಜ್ಯ ಕಾಂಗ್ರೆಸ್ ಅಧ್ಯಕ್ಷ ನಾನಾ ಪಟೋಲೆ ತಮ್ಮನ್ನು ಅವಮಾನಿಸಿರುವುದಾಗಿ ಆರೋಪಿಸಿರುವ ಅವರು, ತಮ್ಮ ವಿರುದ್ಧ ಪಿತೂರಿ ನಡೆಸುತ್ತಿದ್ದಾಗಿ ಆರೋಪಿಸಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ರವಾನಿಸಿರುವ ಪತ್ರದಲ್ಲಿ ತಿಳಿಸಿದ್ದಾರೆ.

ಖರ್ಗೆಯವರಿಗೆ ಬರೆದ ಪತ್ರದಲ್ಲಿ ಥೋರಟ್ ಅವರು ಪಟೋಲೆ ಅವರಿಂದ ಹೇಗೆ ಅವಮಾನಕ್ಕೊಳಗಾದರು ಎಂಬುದನ್ನು ಪಟ್ಟಿ ಮಾಡಿದ್ದಾರೆ. ಸಾರ್ವಜನಿಕವಾಗಿ ತಮ್ಮ ಕುಟುಂಬ ಸದಸ್ಯರ ವಿರುದ್ಧ ಹೇಳಿಕೆಗಳನ್ನುನೀಡಲಾಯಿತು. ಪಕ್ಷದ ಸಭೆಗಳಲ್ಲಿ ತಮ್ಮನ್ನು ಗುರಿಯಾಗಿಸಿಕೊಂಡು ಅವಮಾನಿಸುತ್ತಿದ್ದ ಪಟೋಲೆ ಅವರ ನಾಯಕತ್ವದಲ್ಲಿ ಕೆಲಸ ಮಾಡುವುದು ಕಷ್ಟಕರವಾಗಿತ್ತು ಎಂದು ಥೋರಟ್ ದೂರಿದ್ದಾರೆ.

## ಲಂಬಾಣಿ ಮಹಿಳೆಯರೊಂದಿಗೆ ಹೆಜ್ಜೆ ಹಾಕಿದ ಸಿದ್ದರಾಮಯ್ಯ



ಬೆಂಗಳೂರು: ಈ ಬಾರಿಯ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಗೆದ್ದು, ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಪ್ರತಿಪಕ್ಷ ಕಾಂಗ್ರೆಸ್ ನಾಯಕರು ಕಾಲಿಗೆ ಚಕ್ರ ಕಟ್ಟಿಕೊಂಡವರಂತೆ ರಾಜ್ಯಾದ್ಯಂತ ಪ್ರವಾಸ ಮಾಡುತ್ತಿದ್ದಾರೆ. ಮುಖ್ಯಮಂತ್ರಿ ಆಕಾಂಕ್ಷಿಯಾಗಿರುವ ಸಿದ್ದರಾಮಯ್ಯ, ಉತ್ಸಾಹ, ಹುರುಪಿನಲ್ಲಿಯೇ ರಾಜ್ಯ ಸುತ್ತುತಿದ್ದು ಸಭೆ, ಸಮಾರಂಭಗಳಲ್ಲಿ ಲವಲವಿಕೆಯಿಂದ ಪಾಲ್ಗೊಳ್ಳುತ್ತಿದ್ದಾರೆ.

ಕಲಬುರಗಿಯಲ್ಲಿಂದು ನಡೆದ ಪ್ರಜಾಧ್ವನಿ ಯಾತ್ರೆಯಲ್ಲಿ ಪಾಲ್ಗೊಂಡ ಸಿದ್ದರಾಮಯ್ಯ, ಲಂಬಾಣಿ ಮಹಿಳೆಯೊಂದಿಗೆ ಹೆಜ್ಜೆ ಹಾಕುವ ಮೂಲಕ ಗಮನ ಸೆಳೆದರು. ಈ ಕುರಿತು ಟ್ವೀಟ್ ಮಾಡಿರುವ ವಿಪಕ್ಷ ನಾಯಕ, ಈ ನೆಲ ವೈಶಿಷ್ಟ್ಯಪೂರ್ಣ ಕಲೆ, ಸಂಸ್ಕೃತಿ, ಸಾಹಿತ್ಯದ ತವರು. ಇಲ್ಲಿನ ಪ್ರತಿ ಸಮುದಾಯದ ಆಚರಣೆ, ನಂಬಿಕೆಗಳ ವೈವಿಧ್ಯದಲ್ಲಿಯೇ ವಿಶಿಷ್ಟತೆಯ ಸೊಬಗಿದೆ. ಇದೇ ಪರಂಪರೆಯ ಲಂಬಾಣಿ ಜನರ ವಿಶಿಷ್ಟ ನೃತ್ಯ ಪ್ರಕಾರಕ್ಕಿಂದು ಅವರೊಳಗೊಬ್ಬನಾಗಿ ಹೆಜ್ಜೆಹಾಕಿದ್ದು ಖುಷಿ ನೀಡಿತು ಎಂದು ಬರೆದುಕೊಂಡಿದ್ದಾರೆ.

ನಂತರ ಪ್ರಜಾಧ್ವನಿ ಸಮಾವೇಶದಲ್ಲಿ ಹಿಂದಿನ ಕಾಂಗ್ರೆಸ್ ಸರ್ಕಾರದ ಸಾಧನೆಗಳು ಮತ್ತು ಮುಂದೆ ನಾವು ಅಧಿಕಾರಕ್ಕೆ ಬಂದ ಸಂದರ್ಭದಲ್ಲಿ ಜಾರಿಗೆ ತರುವ ಜನಪರ ಯೋಜನೆಗಳ ಬಗ್ಗೆ ಸಿದ್ದರಾಮಯ್ಯ ಮಾಹಿತಿ ನೀಡಿದರು.

## ಭಾರತದ ಎಲ್ಲ ಬ್ರಾಹ್ಮಣರು ಒಂದೇ: ಅಶೋಕ್ ತಿರುಗೇಟು





ಬೆಂಗಳೂರು: ಕೇಂದ್ರ ಸಚಿವ ಪ್ರಹ್ಲಾದ ಜೋಶಿ ವಿರುದ್ಧ ಟೀಕೆ ಮಾಡುವಾಗ ಬ್ರಾಹ್ಮಣರ ವಿರುದ್ಧ ಮಾತನಾಡಿದ ಮಾಜಿ ಸಿಎಂ ಎಚ್ ಡಿ ಕುಮಾರಸ್ವಾಮಿ ಅವರ ಹೇಳಿಕೆಗೆ ಸಚಿವ ಆರ್.ಅಶೋಕ್ ಪ್ರತಿಕ್ರಿಯೆ ನೀಡಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಅವರು, ಎಚ್ ಡಿ ಕುಮಾರಸ್ವಾಮಿಯವರೇ ಭಾರತದ ಎಲ್ಲ ಬ್ರಾಹ್ಮಣರು ಒಂದೇ. ಅವರು ಬ್ರಾಹ್ಮಣರು ಅಷ್ಟೇ. ಮಹಾರಾಷ್ಟ್ರ, ತಮಿಳುನಾಡು, ಕರ್ನಾಟಕದ ಬ್ರಾಹ್ಮಣರು ಎಂದು ವಿಂಗಡಣೆ ಮಾಡುತ್ತ, ನೀವು ಬ್ರಿಟಿಷರ ಹಾಗೆ ಒಡೆದು ಆಳುವ ನೀತಿ ಅನುಸರಿಸುತ್ತಿದ್ದೀರಿ ಎಂದಿದ್ದಾರೆ.

ರಾಷ್ಟ್ರಕ್ಕೆ, ರಾಜ್ಯಕ್ಕೆ ಎಲ್ಲರಂತೆ ಬ್ರಾಹ್ಮಣ ಸಮಾಜದ ಕೊಡುಗೆಯು ಸಾಕಷ್ಟಿದೆ.

ಸ್ವಭಾವತಃ ಸಾಧುಗಳಾದ ಬ್ರಾಹ್ಮಣರ ಮೇಲೆ ಮಾತನಾಡಿ, ಆ ಸಮಾಜಕ್ಕೆ ನೋವುಂಟುಮಾಡಿದ್ದಕ್ಕಾಗಿ ನೀವು ತಕ್ಷಣ ಕ್ಷಮೆ ಕೇಳಲೇಬೇಕು ಎಂದು ಸಚಿವರು ಆಗ್ರಹಿಸಿದ್ದಾರೆ.

# ಮುದನೂರ ಗ್ರಾಮದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಉದ್ಘಾಟನೆ



ಕೆಂಭಾವಿ: ರಾಜ್ಯದಲ್ಲಿ ಒಟ್ಟು 830 ವಸತಿ ಶಾಲೆಗಳಿದ್ದು ಇಲ್ಲಿ ಕಲಿಯುವ ಮಕ್ಕಳು ಸಮಾಜದ ಕಟ್ಟಕಡೆಯ ವ್ಯಕ್ತಿಗಳ ಮಕ್ಕಳಾಗಿದ್ದಾರೆ. ಈ ಬಾರಿ ಹತ್ತನೆ ತರಗತಿಯಲ್ಲಿ ಶೇ. 99 ರಷ್ಟು ಸಾಧನೆ ಮಾಡಿರುವ ಸರ್ಕಾರದ ಇಂತಹ ವಸತಿ ಶಾಲೆಗಳು ಖಾಸಗಿ ಶಾಲೆಗಳಿಗೆ ಏನೂ ಕಮ್ಮಿ ಇಲ್ಲವೆಂಬುದನ್ನು ಸಾಬೀತುಪಡಿಸಿದೆ ಎಂದು ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಸಮಾಜ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಸಮೀಪದ ಮುದನೂರ ಗ್ರಾಮದಲ್ಲಿ ಸುಮಾರು 24 ಕೋಟಿ ರೂಗಳ ವೆಚ್ಚದಲ್ಲಿ ನಿರ್ಮಿಸಲಾದ ಡಾ. ಬಿ. ಆರ್. ಅಂಬೇಡ್ಕರ್ ವಸತಿ ಶಾಲೆ ನೂತನ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದ ಅವರು ಡಾ. ಬಿ. ಆರ್. ಅಂಬೇಡ್ಕರ್ ಅವರ ಕನಸು ನನಸಾಗಬೇಕಾದರೆ ಸಮಾಜದ ಪ್ರತಿಯೊಬ್ಬರೂ ಶಿಕ್ಷಣವಂತರಾಗಬೇಕು, ಶಿಕ್ಷಣವೇ ಅಭಿವೃದ್ಧಿಯ ಶಕ್ತಿ.

ಅಂಬೇಡ್ಕರ್ ಅವರು ಇಡೀ ವಿಶ್ವವೇ ಮೆಚ್ಚುವಂಥಾ ಸಂವಿಧಾನವನ್ನು ನಮ್ಮ ಭಾರತ ದೇಶಕ್ಕೆ ನೀಡಿದ್ದಾರೆ. ಅವರ ಕೆಲಸದಲ್ಲಿ ಇದ್ದ ಶ್ರದ್ಧೆ, ನಿಷ್ಠೆ, ಪ್ರಾಮಾಣಿಕತೆಯನ್ನು ಇಂದಿನ ಯುವ ಪೀಳಿಗೆ ಮೈಗೂಡಿಸಿಕೊಳ್ಳಬೇಕೆಂದು ಕರೆ ನೀಡಿದ ಅವರು ಹೆಣ್ಣುಮಕ್ಕಳ ಸ್ವಯಂ ರಕ್ಷಣೆಗೆ ವಸತಿ ಶಾಲೆಗಳಲ್ಲಿ ಕರಾಟೆ ಕಲಿಸುವ ಹೊಸ ಯೋಜನೆಯನ್ನು ರೂಪಿಸಿದ್ದು ಅದ–ಕ್ಕೆ ವರ್ಷಕ್ಕೆ 18 ಕೋಟಿ ರೂಗಳನ್ನು ಮೀಸಲಾಡಗಿದೆ. ರಾಜ್ಯದಲ್ಲಿ ಈ ಬಾರಿ 540 ವಸತಿ ಶಾಲೆಗಳಲ್ಲಿ ಕಾಲೇಜು ಶಿಕ್ಷಣವನ್ನು ಪ್ರಾರಂಭಿಸಲಾಗುವುದು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ನರಸಿಂಹ ನಾಯಕ (ರಾಜುಗೌಡ), ಸಮಾಜ ಕಲ್ಯಾಣ ಇಲಾಖೆಯಲ್ಲಿ ಸಂಪೂರ್ಣ ಭ್ರಷ್ಟಾಚಾರ ತೊಡೆದು ಹಾಕಲು ಪಣ ತೊಟ್ಟಿರುವ ಕೋಟ ಅವರು ರಾಜ್ಯದ ಶಾಸಕರಲ್ಲಿಯೆ ಅತೀ ಕಡಿಮೆ ಖರ್ಚಿನ ಶಾಸಕರೆಂದು ಬಿರುದು ಹೊಂದಿದ್ದಾರೆ.

ರಾಜ್ಯದ ಪ್ರತಿಯೊಂದು ಗ್ರಾಮ ಪಂಚಾಯತಿಗಳಲ್ಲಿ ವಸತಿ ಶಾಲೆಗಳನ್ನು ನಿರ್ಮಾಣ ಮಾಡುವಂತೆ ಮನವಿ ಮಾಡಿದರು.

ಇದಕ್ಕೂ ಮೊದಲು ವಿಶಾಲ ಪ್ರದೇಶದಲ್ಲಿ ನಿರ್ಮಿಸಲಾದ ವಸತಿ ಶಾಲೆಯ ವಿವಿಧ ಕಟ್ಟಡಗಳನ್ನು ರಿಬ್ಬನ್ ಕತ್ತರಿಸುವ ಮೂಲಕ ಸಚಿವರು ಹಾಗೂ ಶಾಸಕರು ಲೋಕಾರ್ಪಣೆಗೊಳಿಸಿದರು.

ಈ ಸಂದರ್ಭದಲ್ಲಿ ಅಲೆಮಾರಿ, ಅರೆ ಅಲೆಮಾರಿ ನಿಗಮದ ಅಧ್ಯಕ್ಷ ದೇವೆಂದ್ರನಾಥ ಕೆ ನಾದ್, ಸಮಾಜ ಕಲ್ಯಾಣ ಉಪ ನಿರ್ದೇಶಕ ಎಸ್. ಎಸ್. ಚನ್ನಬಸಪ್ಪ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಭುದೊರೆ, ಹುಣಸಗಿ ತಹಶೀಲ್ದಾರ ಜಗದೀಶ ಚೌರ್ ಸೇರಿದಂತೆ ಇನ್ನಿತರ ಅಧಿಕಾರಿಗಳು ಮುಖಂಡರು ಉಪಸ್ಥಿತರಿದ್ದರು.

# 6ನೇ ತರಗತಿ ವಸತಿ ಶಾಲೆಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: 2023–2024 ನೇ ಸಾಲಿಗ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಬೆಳಗಾವಿ ಜಿಲ್ಲೆಯಲ್ಲಿ ಮೊರರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಇತರೆ ವಸತಿ ಶಾಲೆಗಳ 6ನೇ ತರಗತಿಯ ದಾಖಲಾತಿಗಾಗಿ ಮಾರ್ಚ್ 12, 2023 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ವರೆಗೆ ಪರೀಕ್ಷೆ ನಡೆಯಲಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ವತಿಯಿಂದ ಪ್ರವೇಶ ಪರೀಕ್ಷೆ ಮತ್ತು ಆನ್‌ಲೈನ್ ಕೌನ್ಸಿಲಿಂಗ್ ನಡೆಸಲಾಗುವುದು.

ಪ್ರಸ್ತುತ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪಾಲಕರು/ಪೋಷಕರು ತಮ್ಮ ಮಕ್ಕಳನ್ನು 6ನೇ ತರಗತಿಗೆ ವಸತಿ ಶಾಲೆಗಳಿಗೆ ದಾಖಲಿಸಲು ಜನವರಿ 5, 2023 ರಿಂದ ಜನವರಿ 22 ರವರೆಗೆ ಅವಶ್ಯಕ ದಾಖಲಾತಿಗಳೊಂದಿಗೆ ತಮ್ಮ ಹತ್ತಿರದ ವಸತಿ ಶಾಲೆಗಳ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಲ ಸಂಜೀವೀನಿ ಕುರಿತು ಅರಿವು ಕಾರ್ಯಕ್ರಮ



ತಿಕೋಟಾ: ತಾಲೂಕಿನ ಬಾಬಾನಗರ ಗ್ರಾಮದಲ್ಲಿ ಮನರೇಗಾ ಯೋಜನೆಯಡಿ ಜಲ ಸಂಜೀವಿನಿ ಯೋಜನೆಯ ಪಿಆರ್‌ಎ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ತಾಲೂಕು ಐಇಸಿ ಸಂಯೋಜಕರಾದ ಕಲ್ಲಪ್ಪ ನಂದರಗಿ ಅವರು "ಗ್ರಾಮೀಣ ಜನರ ಸಹಭಾಗಿತ್ವದಲ್ಲಿ ಅವರ ಸಮಸ್ಯೆಗಳನ್ನು ಅರ್ಥೈಸಿಕೊಂಡು, ಅವರೊಡನೆ ಚರ್ಚಿಸಿ ಅವರ ಸಮಸ್ಯೆಗಳಿಗೆ ಪರಿಹಾರ ಕಂಡು ಹಿಡಿಯುವ ಮಾರ್ಗವೇ ಈ ಪಿಆರ್‌ಎ ಆಗಿದೆ. ಈ ಜಲ ಸಂಜೀವಿನಿ ಯೋಜನೆಯಡಿ ಅರ್ಹ & ನಿಗದಿತ ಸ್ಥಳಗಳಲ್ಲಿ ಮನರೇಗಾ ಕಾಮಗಾರಿಗಳನ್ನು ವೈಜ್ಞಾನಿಕವಾಗಿ ಅನುಷ್ಠಾನ ಮಾಡಲು ಈ ಅಭಿಯಾನ ಸಹಕಾರಿಯಾಗುತ್ತದೆ. ಹೀಗಾಗಿ ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಒಂದು ಗ್ರಾಮಕ್ಕೆ ವರ್ಷದಲ್ಲಿ ಪ್ರವೇಶಿಸುವ ನೀರಿನ ಪ್ರಮಾಣ & ನಿರ್ಗಮಿಸುವ ನೀರಿನ ಪ್ರಮಾಣದ ಕುರಿತು ಲೆಕ್ಕಾಚಾರ ಹಾಕಿ ಈ ಯೋಜನೆಯ ಆಯವ್ಯಯ ತಯಾರಿಸಲಾಗುತ್ತಿದೆ ಎಂದರು.

ತಾಂತ್ರೀಕ ಸಹಾಯಕ ಅಭಿಯಂತರರಾದ ಚೇತನ ರಾಠೋಡ ಮಾತನಾಡಿ "ಭೂ ಪ್ರದೇಶದ ವೈಶಿಷ್ಟ್ಯತೆಗಳನ್ನು ನಕ್ಷೆಗಳ ಮೂಲಕ ತಿಳಿಸಿ ಕೊಡುವ ಕಂಪ್ಯೂಟರ್ ಆಧಾರಿತ ಸಾಧನವಾದ ಜಿಐಎಸ್ ಮೂಲಕ ಜಲ ಸಂಜೀವಿನಿ ಯೋಜನೆಯಡಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಈ ರೀತಿಯಾಗಿ ನಾವು ಜಿಐಎಸ್ ಆಧಾರಿತ & ವೈಜ್ಞಾನಿಕ ಕಾಮಗಾರಿಗಳನ್ನು ಕೈಗೊಳ್ಳುವದರಿಂದ ನಾವು ನೀರಿನ ಪ್ರವಾಹವಾಗುವದನ್ನು ಅಥವಾ ನೀರಿನ ಬರ ಉಂಟಾಗುವದನ್ನು ತಡೆಗಟ್ಟಬಹುದಾಗಿದೆ ಎಂದರು.

ಶಿವಾನಂದ ಬಡಿಗೇರ ಅವರು ಮಾತನಾಡಿ "ಈ ಜಲಸಂಜೀವಿನಿ ಯೋಜನೆಯಡಿ ಮಣ್ಣು, ನೀರು & ಪರಿಸರ ರಕ್ಷಣೆ ಮತ್ತು ಅಭಿವೃದ್ಧಿ ಮಾಡುವ ಉದ್ದೇಶ ಹೊಂದಲಾಗಿದೆ. ಈ ನಿಟ್ಟಿನಲ್ಲಿ ನಾವು ಈ ಗ್ರಾಮದ ನಕ್ಷೆಯನ್ನು ಬಿಡಿಸುವ ಮೂಲಕ ನಿಮ್ಮ ಗ್ರಾಮದ ಸ್ಥಿತಿಯನ್ನು ಅರ್ಥೈಸಿಕೊಂಡು ಅದಕ್ಕೆ ಸೂಕ್ತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ಗ್ರಾ.ಪಂ ಉಫಾಧ್ಯಕ್ಷರಾದ ಶ್ರೀಕಾಂತ ಭಜಂತ್ರಿ, ಕಾರ್ಯದರ್ಶಿಗಳಾದ ಸಿ.ಬಿ.ಕೋಲಕಾರ, ಸದಸ್ಯರಾದ ಅಶೋಕ ರುದ್ರಗೌಡರ, ಶಿವಾನಂದ ವಿಜಾಪೂರ, ಗ್ರಾಮ ಪಂಚಾಯತಿಯ ನಾರಾಯಣ ಶಿಂಧೆ, ಜಾಕೀರ ಏಳಾಪುರ, ಪ್ರಕಾಶ ವಾಲಿಕಾರ, ಮಲ್ಲಮ್ಮ ಕೋಳಿ, ಶೋಭಾ ಕೋಳಿ, ಪೂಜಾ ಮುರಾರಿ, ಸಂಗಪ್ಪ ಪೂಜಾರಿ ಸೇರಿದಂತೆ ಇತರರು ಹಾಜರಿದ್ದರು.

# ಅಸ್ವಸ್ಥಗೊಂಡಿದ್ದ ಬಹುತೇಕ ವಿದ್ಯಾರ್ಥಿಗಳು ಗುಣಮುಖ



ಮಂಗಳೂರು: ಫುಡ್ ಪಾಯ್ಸನ್ ನಿಂದಾಗಿ ಅಸ್ವಸ್ಥಗೊಂಡಿದ್ದ ನಗರದ ಹೊರವಲಯದಲ್ಲಿರುವ ಖಾಸಗಿ ನರ್ಸಿಂಗ್ ಕಾಲೇಜು ಹಾಸ್ಟೆಲ್ ನ ಬಹುತೇಕ ವಿದ್ಯಾರ್ಥಿಗಳು ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗ–'ಡೆಗೊಂಡಿದ್ದಾರೆ.

ಸೋಮವಾರ ಒಟ್ಟು 116 ಮಂದಿ ವಾಂತಿ ಬೇಧಿಯಿಂದಾಗಿ ಆಸ್ಪತ್ರೆಗೆ ದಾಖಲಾಗಿದ್ದರು. ಮಂಗಳವಾರ ಮತ್ತೆ 13 ಮಂದಿ ವಿದ್ಯಾರ್ಥಿನಿಯರಲ್ಲಿ ಹೊಟ್ಟೆನೋವು, ಜ್ವರದ ಲಕ್ಷಣ ಕಂಡುಬಂದಿದ್ದು ಆಸ್ಪತ್ರೆಗೆ ದಾಖಲಿಸಲಾಗಿದೆ.

ಸದ್ಯ ಒಟ್ಟು 38 ಮಂದಿ ವಿದ್ಯಾರ್ಥಿಗಳು ಆಸ್ಪತ್ರೆಯಲ್ಲಿದ್ದಾರೆ. ಉಳಿದ ಎಲ್ಲ ವಿದ್ಯಾರ್ಥಿಗಳು ಬಿಡುಗಡೆಗೊಂಡಿದ್ದಾರೆ ಎಂದು ಆರೋಗ್ಯ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ಹಾಸ್ಟೆಲ್ ನಲ್ಲಿ ಒಟ್ಟು 782 ವಿದ್ಯಾರ್ಥಿಗಳಿದ್ದರು. ಮುನ್ನೆಚ್ಚರಿಕಾ ಕ್ರಮವಾಗಿ ಹಾಸ್ಟೆಲ್ ನಲ್ಲಿ ತಜ್ಞ ವೈದ್ಯರ ತಂಡ ನಿಯೋಜಿಸಲಾಗಿದೆ.

# ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳ ನೇಮಕಾತಿ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಖಾನಾಪೂರ ಮತ್ತು ರಾಯಬಾಗ ತಾಲೂಕಿನ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ (ವ್ಹಿ,ಆರ್,ಡಬ್ಲ್ಯೂ) ಹುದ್ದೆಗಳ ನೇಮಕಾತಿಗಾಗಿ ಆಯಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಇಲಾಖೆಯ ಗ್ರಾಮೀಣ ಪುನರ್ವಸತಿ ಯೋಜನೆ ಅಡಿ ಮಾಸಿಕ 9000 ರೂಗಳ ಗೌರವಧನ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ವಿಕಲಚೇತನ ಅಭ್ಯರ್ಥಿಗಳು ಫೆಬ್ರವರಿ 17, 2023 ರ ಸಂಜೆ 5 ಗಂಟೆಗಳ ಒಳಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ ಕಾರ್ಯಾಲಯ ಖಾನಾಪೂರ ಮತ್ತು ರಾಯಬಾಗ ಇವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಖಾನಾಪೂರ ತಾಲೂಕಿನ ನಾಗರಗಾಳಿ ಗ್ರಾಮ ಪಂಚಾಯಿತಿಯಲ್ಲಿ 1 ಹುದ್ದೆ ಖಾಲಿ ಇರುತ್ತದೆ. ರಾಯಬಾಗ ತಾಲೂಕಿನ ಬೆಕ್ಕೇರಿ(1), ಮೊರಬ(1) ಹಾಗೂ ಹುಬ್ಬರವಾಡಿ(1) ಗ್ರಾಮ ಪಂಚಾಯಿತಿಯಲ್ಲಿ ತಲಾ ಒಂದು ಹುದ್ದೆಗಳು ಖಾಲಿ ಇರುತ್ತವೆ.

**ಷರತ್ತುಗಳು:**

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ವಿಕಲಚೇತನರಾಗಿದ್ದು, ಶೇಕಡ 40 ರಷ್ಟು ವಿಕಲತೆ ಪ್ರಮಾಣ ಹೊಂದಿರತಕ್ಕದ್ದು, ಗ್ರಾಮ ಪಂಚಾಯತಿಗಳ ವ್ಯಾಪ್ತಿಗೊಳಪಟ್ಟಿರಬೇಕು. ಅರ್ಜಿದಾರರು ಕನಿಷ್ಠ ಎಸ್ಸೆಸ್ಸೆಲ್ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿದ್ದು, ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಮತ್ತು ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕ ಫೆಬ್ರುವರಿ 17, 2023 ಕ್ಕೆ ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷ ವಯೋಮಿತಿಯಲ್ಲಿರಬೇಕು.

ವಿಕಲಚೇತನ ಮಹಿಳಾ, ಪ. ಜಾತಿ ಮತ್ತು ಪ. ಪಂಗಡದ ಅಭ್ಯರ್ಥಿಗಳು ಹಾಗೂ ಇಲಾಖೆಯ ಯೋಜನೆಗಳ ಬಗ್ಗೆ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆನೆಕಾಲು ರೋಗ ನಿವಾರಣೆಗಾಗಿ ಗುಳಿಗೆ ನುಂಗಿ: ಡಾ. ತಿವಾರಿ



ತಾಳಿಕೋಟೆ: ಕಳೆದ 15 ವರ್ಷಗಳಿಂದ ಆನೆಕಾಲು ರೋಗ ನಿವಾರಣೆಗಾಗಿ ಆರೋಗ್ಯ ಇಲಾಖೆಯಿಂದ ನೀಡಲಾಗುತ್ತಿರುವ ಗುಳಿಗೆಗಳಿಂದ ಕೆಲವೆಡೆ ರೋಗ ನಿಯಂತ್ರಣಕ್ಕೆ ಬಂದಿದ್ದರೂ ಮುದ್ದೇಬಿಹಾಳ ತಾಳಿಕೋಟೆ ತಾಲೂಕಿನಲ್ಲಿ ಇನ್ನೂ ಗುಳಿಗೆ ನುಂಗಿಸುವ ಕಾರ್ಯ ನಡೆಯಬೇಕಾಗಿದೆ ಎಂದು ತಾಲೂಕಾ ಆರೋಗ್ಯಾಧಿಕಾರಿಯಾದ ಡಾ॥ ಸತೀಶ್ ತಿವಾರಿ ಅವರು ನುಡಿದರು.

ಮಂಗಳವಾರರಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಜಯಪುರ ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಕ್ರಮದಡಿ ಆನೆಕಾಲು ರೋಗ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಫೆ. 10 ರಿಂದ ಫೆ. 28 ರವರೆಗೆ ಜರುಗಲಿರುವ ಸಾಮೂಹಿಕ ಔಷಧ ಸೇವನೆಯ ಕಾರ್ಯಕ್ರಮ ಕುರಿತು ತಹಶೀಲ್ದಾರ್ ಕಚೇರಿಯಲ್ಲಿ ಏರ್ಪಡಿಸಲಾದ ಪೂರ್ವಭಾವಿ ಸಭೆಯಲ್ಲಿ ಮಾತಾಡುತ್ತಿದ್ದ ಅವರು ಮುದ್ದೇಬಿಹಾಳ ತಾಳಿಕೋಟೆ ತಾಲೂಕುಗಳಿಗೆ ಎಬಿ ಎಂಬ ಬೆಲ್ಟ್ ಮಾಡಲಾಗಿದೆ ಈವರೆಗೆ ತುಂಬಗಿಯಲ್ಲಿ ಹಿರೂರ, ತಮದಡ್ಡಿ, ಪತ್ತೇಪೂರ ಒಳಗೊಂಡು ಕೆಲವು ಗ್ರಾಮಗಳಲ್ಲಿ ಈ ರೋಗ ಕಂಡುಬಂದಿದೆ ಇದರ ನಿಯಂತ್ರಣಕ್ಕಾಗಿಯೇ ಡಿಇಸಿ ಅಲ್ಬೆಂಡಜೋಲ್ ಗುಳಿಗೆಗಳನ್ನು ನುಂಗಿಸಲಾಗುತ್ತದೆ ಗುಳಿಗೆಗಳನ್ನು ನುಂಗುವವರು ಊಟ ಮಾಡಿಯೇ ನುಂಗಬೇಕೆಂದು ಹೇಳಿದ ಡಾ॥ ಸತೀಶ್ ಅವರು 2 ವರ್ಷದ ಒಳಗಿನವರಿಗೆ, ಗರ್ಭಿಣಿಯವರಿಗೆ ಕ್ಯಾನ್ಸರ್ ಪೀಡಿತ ಇನ್ನಿತರ ರೋಗಿಗಳಿಗೆ ಗುಳಿಗೆಗಳನ್ನು ನುಂಗಲು ಕೊಡುವುದಿಲ್ಲವೆಂದರು. ಪ್ರತಿದಿನ 50 ರಿಂದ 100 ಮನೆಗಳಿಗೆ ಭೆಟ್ಟಿನೀಡಿ ಗುಳಿಗೆ ನುಂಗಿಸುವ ಕಾರ್ಯ ನಡೆಸಲಾಗುತ್ತದೆ ಗುಳಿಗೆ ನುಂಗದವರ ಹೆಸರುಗಳನ್ನು ಆಡಳಿತ ಇಲಾಖಾ ಅಧಿಕಾರಿ ವರ್ಗಕ್ಕೆ ಸೂಚಿಸಿ ಮನ ಒಲಿಸುವ ಕಾರ್ಯ ನಡೆಯಲಿದೆ ಕಾರಣ ಎಲ್ಲ ಇಲಾಖೆಯ ಸಿಬ್ಬಂದಿಗಳು ಈ ಕುರಿತು ಕಾರ್ಯೋನ್ಮುಖರಾಗಬೇಕೆಂದರು.

ಇನ್ಸ್ನೋರ್ವ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಬಂಡಿಯವರು ಮಾತನಾಡಿ 2000 ರ ಸಾಲಿನಲ್ಲಿ ಎಂಡಿ ಕಾರ್ಯಕ್ರಮ ಜಾರಿಗೆ ತರಲಾಯಿತು ಈ ರೋಗ ಕರ್ನಾಟಕದ 9ಜಿಲ್ಲೆಗಳಲ್ಲಿತ್ತು ವಿಜಯಪುರ ಜಿಲ್ಲೆಯಲ್ಲಿ ಮುದ್ದೇಬಿಹಾಳ, ಸಿಂದಗಿ ತಾಲೂಕುಗಳಲ್ಲಿ 1 ಪರ್ಸೆಂಟೇಸ್ ಬಂದಿದೆ ಕಾರಣ ಗುಳಿಗೆ ನುಂಗಿಸುವ ಕಾರ್ಯಕ್ರಮವು ಹಾಸ್ಟೆಲ್ ಶಾಲಾ ಕಾಲೇಜುಗಳಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ಈ ಕುರಿತು ಮಾಹಿತಿ ನೀಡಿ ಎಚ್ಚರ ವಹಿಸಿ ಊಟ ಮಾಡಿದ ನಂತರ ಗುಳಿಗೆ ನುಂಗಿಸುವ ಕಾರ್ಯವಾಗಬೇಕೆಂದರಲ್ಲದೇ ರೋಗ ನಿವಾರಣೆಗಾಗಿ ಹೆಚ್ಚಿನ ಪ್ರಚಾರ ಕೈಕೊಳ್ಳಬೇಕಾಗಿದೆ ಎಂದು ಎಲ್ಲ ಉಪಸ್ಥಿತ ಅಧಿಕಾರಿ ವರ್ಗದವರಿಗೆ ಸೂಚಿಸಿದರು.

ಇನ್ಸ್ನೋರ್ವ ಜಿಲ್ಲಾಮಟ್ಟದ ಎನ್ ವ್ಹಿ ಬಿಡಿಸಿಪಿ ಅಧಿಕಾರಿ ಶ್ರೀಮತಿ ರಹಿಮೂನಿಸಾ ಬೀಳಗಿ ಅವರು ಮಾತನಾಡಿ ತಾಳಿಕೋಟೆ ಕಂದಾಯ ಇಲಾಖೆ ಹಾಗೂ ಪುರಸಭೆಯ ಹಾಗೂ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಪಿಡಿಓ ಅವರು ಕೂಡಲೇ ತಮ್ಮ ಸಿಬ್ಬಂದಿಯೊಂದಿಗೆ ಕಾರ್ಯೋನ್ಮುಖರಾಗಬೇಕು ಆನೇಕಾಲು ರೋಗ ನಿಯಂತ್ರಣ ಕುರಿತು ತಿಳುವಳಿಕೆಗೆ ಮುಂದಾಗಬೇಕು ಶಾಲಾ ಮಕ್ಕಳಿಗೆ ತಿಳುವಳಿಕೆ ನೀಡುವ ಕಾರ್ಯವಾಗಬೇಕು ಪೋಲಿಯೋ ನಿವಾರಣೆಗೆ ಕೈಕೊಂಡಂತಹ ಬೂತ್ ಗಳನ್ನು ರಚನೆ ಮಾಡಿದರೆ ಸಲಹೆ ಸೂಚನೆಯಂತೆ ಗುಳಿಗೆಗಳನ್ನು ನುಂಗಿಸುವ ಕಾರ್ಯ ಮುಂದುವರೆಯಲು ಸಹಾಯಕಾರಿಯಾಗುತ್ತದೆ ಎಂದು ಆನೇಕಾಲು ರೋಗದಿಂದ ಕಾಲು ದಪ್ಪಾಗಿ ಇತ್ತೀಚೆಗೆ ಯಲಗೂರದಲ್ಲಿ ಮೃತಪಟ್ಟ ಯುವಕನ ವಿಷಯವನ್ನು ಶ್ರೀಮತಿ ಡಾ. ಬೀಳಗಿ ಅವರು ವಿವರಿಸಿದರು.

ಇದೇ ಸಮಯದಲ್ಲಿ ಆನೆಕಾಲು ರೋಗ ಉಲ್ಬಣವಾಗುವ ಹಾಗೂ ಉಲ್ಬಣಗೊಂಡ ಚಿತ್ರವಿವರಣೆಯನ್ನು ಪ್ರೊಜೆಕ್ಟರ್ ಮುಖಾಂತರ ಅಧಿಕಾರಿವರ್ಗದವರೆಲ್ಲರೂ ವೀಕ್ಷಿಸಿದರು.

ಸಭೆಯ ಅಧ್ಯಕ್ಷತೆಯನ್ನು ವಹಿಸಿದ ತಾಳಿಕೋಟೆ ತಾಲೂಕಾ ತಹಶೀಲ್ದಾರರಾದ ಎಸ್.ಎಸ್. ಅರಕೇರಿ ಅವರು ಮಾತನಾಡಿ ಇಂದಿನ ಕಾರ್ಯಕ್ರಮವು ಒಳ್ಳೆಯ ಆರೋಗ್ಯ ನಿರ್ಮಾಣ ಮಾಡುವಂತಹ ಕಾರ್ಯಕ್ರಮ ಇದಾಗಿದೆ ನಮ್ಮ ಇಲಾಖೆ ಒಳಗೊಂಡು ತಾಲೂಕಾ ಪಂಚಾಯತ್ ಅಧಿಕಾರಿವರ್ಗ, ಪಿಡಿಓ ಅವರನ್ನೆಲ್ಲ ಒಳಗೊಂಡು ಆನೆಕಾಲು ರೋಗ ನಿವಾರಣೆಗಾಗಿ ಮುಂದಾಗುತ್ತೇವೆಂದರು.

ಈ ಸಮಯದಲ್ಲಿ ತಾಳಿಕೋಟೆ ತಾಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಬಿಆರ್ ಬಿರಾದಾರ, ಪುರಸಭೆಯ ಮುಖ್ಯಾಧಿಕಾರಿ ಸುರೇಶ ನಾಯಕ್ ಕೃಷಿ ಅಧಿಕಾರಿ ಮಹೇಶ ಜೋಷಿ ಮುದ್ದೇಬಿಹಾಳ ಎಸ್ ಎಚ್ ಆಯ್ ಓ ಎಂ.ಎಸ್. ಮನಹಳ್ಳಿ, ಎಚ್ ಆಯ್ ಓ ವಿರೇಶ ಭಜಂತ್ರಿ ಎಂಟಿಎಸ್ ಸುಲೋಮಾನ್ ರುದ್ರವಾಡಿ ಸಿಡಿಪಿಓ ಅಧಿಕಾರಿ ಪರವಾಗಿ ಆಗಮಿಸಿದ ಬಿಎಸ್ ಸುನಂದಾ ಬಿಇಓ ಕಚೇರಿ ಪರವಾಗಿ ಆಗಮಿಸಿದ ರಾಜು ವಿಜಪೂರ ಭಂಟನೂರ ಎಂಓ ಡಾ. ಕಮತರ, ಪಿಎಚ್ ಸಿಓ ಮಹದೇವಿ ಠಕ್ಕಳಕಿ, ಎಚ್ ಆಯ್ ಓ ರಿಯಾಜ್ ಅತ್ತಾರ, ಎಸ್ ಎಚ್ ಆಯ್ ಓ ವ್ಹಿ.ಎಸ್. ಭಂಡಿ, ಉಮೇಶ ಸಾತಳ್ಳಿ ಮೊದಲಾದವರು ಪಾಲ್ಗೊಂಡಿದ್ದರು.

# ಫೆ.12ಕ್ಕೆ ಮಾಜಿ ಸೈನಿಕರ ರ್‍ಯಾಲಿ

ಬೆಳಗಾವಿ: HQ ದಕ್ಷಿಣ ಭಾರತ್ ಏರಿಯಾದ ಆಶ್ರಮದಲ್ಲಿ ಮಾಜಿ ಸೈನಿಕರ ರ್‍ಯಾಲಿಯನ್ನು ಫೆ.12, 2023 ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 5 ರವರೆಗೆ ಬೆಳಗಾವಿಯ ಶಿವಾಜಿ ಮೈದಾನ ಮರಾಠಾ ಲೈಟ್ ಇನ್‌ಫೆಂಟ್ರಿ ರೆಜಿಮೆಂಟಲ್ ಸೆಂಟರ್‌ನಲ್ಲಿ ನಡೆಯಲಾಗುವುದು.

ಮಾಜಿ ಸೈನಿಕರ ಸೇವೆ/ಪಿಂಚಣಿ ಸಂಬಂಧಿತ ಸಮಸ್ಯೆಗಳ ಬಗ್ಗೆ ತಮ್ಮ ಕುಂದುಕೊರತೆಗಳ ಬಗ್ಗೆ ಮಾರ್ಗದರ್ಶನ ಮತ್ತು ಸ್ಪಷ್ಟೀಕರಣವನ್ನು ಪಡೆಯಬಹುದು ಹಾಗೂ ಮಾಜಿ ಸೈನಿಕರಿಗೆ ಅನುಕೂಲವಾಗುವಂತೆ ವೈದ್ಯಕೀಯ ಶಿಬಿರ, ವಿವಿಧ ರೆಜಿಮೆಂಟಗಳಿಗೆ ಪ್ರತ್ಯೇಕ ಕಾಂಟರ ECHS, SPARSH ಮತ್ತು ಬ್ಯಾಂಕ್ ಇತ್ಯಾದಿಗಳನ್ನು ಸ್ಥಾಪಿಸಬಹುದು ಎಂದುಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಂಗಸಂಪದದವರಿಂದ ರಂಗ ತರಬೇತಿ ಕಾರ್ಯಾಗಾರ

ಬೆಳಗಾವಿ: ನಗರದ ರಂಗಸಂಪದದವರು ಚನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ ಖ್ಯಾತ ರಂಗಕರ್ಮಿ ಮತ್ತು ತರಬೇತಿದಾರ ಶ್ರೀ ವೈಭವ ಲೋಕೂರ ಇವರಿಂದ ರಂಗತರಬೇತಿಯನ್ನು ಇದೇ ದಿ.11 ರಂದು ಹಾಲ್ ನಂಬರ 2 ರಲ್ಲಿ ಸಂಜೆ 5 ರಿಂದ 7.30 ರ ವರಗೆ ಮತ್ತು ದಿ. 12ರಂದು ಹಾಲ್ ನಂಬರ 1 ರಲ್ಲಿ ಬೆಳಿಗ್ಗೆ 11 ರಿಂದ 1.30 ರ ವರೆಗೆ ಹಾಗೂ ಮಧ್ಯಾಹ್ನ 2.30 ರಿಂದ 5.00 ವರೆಗೆ (1.30ರಿಂದ 2.30 ಭೋಜನ ವಿರಾಮ) ಶನಿವಾರ ಚಹಾ ತಿಂಡಿ ಮತ್ತು ರವಿವಾರ ಮಧ್ಯಾಹ್ನ ಭೋಜನ ಮತ್ತು ಸಂಜೆ ಚಹಾ ಬಿಸ್ಕತ್ ವ್ಯವಸ್ಥೆ ಮಾಡಲಾಗಿದ್ದು ಆಸಕ್ತರು ದಿ.10, ಸಂಜೆ ಆರು ಗಂಟೆಯೊಳಗಾಗಿ ಸ್ವವಿವರಗಳೊಂದಿಗೆ ರೂ.200 ಪ್ರವೇಶ ಧನವನ್ನು ಸಂಸ್ಥೆ ಅಧ್ಯಕ್ಷರಾದ ಡಾ. ಅರವಿಂದ ಕುಲಕರ್ಣಿಯವರ ವಾಟ್ಸಪ್ ನಂಬರ್ 9845025638 ಗೆ ಕಳುಹಿಸಿ ಹೆಸರು ನೋಂದಾಯಿಸಿಕೊಳ್ಳುವಂತೆ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಬೆಂಕಿ ಅವಘಡ: ಮಹಿಳೆ ಸಜೀವದಹನ

ಬೆಂಗಳೂರು: ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಮತ್ತೊಂದು ಅಗ್ನಿ ದುರಂತ ಸಂಭವಿಸಿದ್ದು, ಮಹಿಳೆಯೋರ್ವರು ಸಜೀವದಹನಗೊಂಡಿರುವ ಘಟನೆ ನಡೆದಿದೆ.

ಬೆಂಗಳೂರಿನ ಮಲ್ಲೇಶ್ವರಂ ಮಂತ್ರಿ ಮಾಲ್ ಹಿಂಭಾಗದಲ್ಲಿರುವ ಮನೆಯೊಂದರಲ್ಲಿ ಅಗ್ನಿ ಅವಘಡ ಸಂಭವಿಸಿದೆ. ಬೆಂಕಿ ದುರಂತದಲ್ಲಿ ಮಹಿಳೆ ಸಜೀವದಹನಗೊಂಡಿದ್ದು, ಓರ್ವ ವ್ಯಕ್ತಿ ಗಂಭೀರವಾಗಿ ಗಾಯಗೊಂಡಿದ್ದಾರೆ.

ಗಾಯಾಳುವನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಬೆಂಕಿ ದುರಂತದಲ್ಲಿ ಸಾವನ್ನಪ್ಪಿದ ಮಹಿಳೆಯನ್ನು ಮೇರಿ (55) ಎಂದು ಗುರುತಿಸಲಾಗಿದೆ. ಶಾರ್ಟ್ ಸರ್ಕ್ಯೂಟ್ ನಿಂದ ಬೆಂಕಿ ಹೊತ್ತಿಕೊಂಡುರಬಹುದು ಎಂದು ಶಂಕಿಸಲಾಗಿದೆ. ಸ್ಥಳಕ್ಕೆ ಧಾವಿಸಿರುವ ಪೊಲೀಸರು ಹಾಗೂ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ.

# ಕುರಿ/ಮೇಕೆ ಘಟಕ ಅನುಷ್ಠಾನಗೊಳಿಸಲು ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಜಿಲ್ಲೆಗೆ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ 2022–23 ನೇ ಸಾಲಿನಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಅಡಿಯಲ್ಲಿ 10+1 ಕುರಿ/ಮೇಕೆ ಘಟಕ ಅನುಷ್ಠಾನಗೊಳಿಸಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಗೆ ಎಸ್.ಸಿ–08.ಎಸ್.ಟಿ–02 ಹಾಗೂ ಸಾಮಾನ್ಯ–52. ಒಟ್ಟು–62 ಗುರಿಗಳನ್ನು ನಿಗದಿಪಡಿಸಲಾಗಿದ್ದು, ನಿಗಮದಲ್ಲಿ ನೋಂದಾಯಿತ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರಿ ಸಂಘದ ಸದಸ್ಯತ್ವವನ್ನು ಹೊಂದಿರುವ 18 ರಿಂದ 60 ವಯೋಮಿತಿಯಲ್ಲಿರುವ ಎಸ್.ಸಿ/ಎಸ್.ಟಿ ಹಾಗೂ ಸಾಮಾನ್ಯ ವರ್ಗದ ಸದಸ್ಯರು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಸದರಿ ಅರ್ಜಿಯನ್ನು ಈ ಕಛೇರಿಯಿಂದ ಅಥವಾ ನಿಗಮದಲ್ಲಿ ನೋಂದಾಯಿತ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರಿ ಸಂಘದ ಕಛೇರಿಗಳಲ್ಲಿ ಫೆ.06 ರಿಂದ ಪಡೆದು ಫೆ.20, 2023ರ ಒಳಗಾಗಿ ಎರಡು ಪ್ರತಿಯಲ್ಲಿ ಅರ್ಜಿಯೊಂದಿಗೆ ಅವಶ್ಯಕ ದಾಖಲೆಗಳನ್ನು ದೃಢೀಕರಿಸಿ ಸಲ್ಲಿಸಬೇಕು ಹಾಗೂ ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ 0831–2431294 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತದಲ್ಲಿ ದಿನಸಿ ವಹಿವಾಟು ವರ್ಧನೆಗೆ ಅಮೆಜಾನ್ ಬದ್ಧತೆ

ಅಮೆಜಾನ್ ಫ್ರೆಶ್‌ನ ನಿರ್ದೇಶಕ ಶ್ರೀಕಾಂತ್ ಶ್ರೀರಾಮ್ ಭಾರತದಲ್ಲಿ ದಿನಸಿ ಶಾಪಿಂಗ್ ಟ್ರೆಂಡ್‌ಗಳ ಬಗ್ಗೆ ಒಳನೋಟಗಳನ್ನು ಹಂಚಿಕೊಂಡಿದ್ದಾರೆ

ಭಾರತದಲ್ಲಿ ಅಮೆಜಾನ್ ದಿನಸಿಯ ಪಯಣದ ಪ್ರಮುಖ ಅಂಶಗಳನ್ನು ಹೇಳಬಹುದೇ?

ದಿನಸಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ವಿಭಾಗವಾಗಿದೆ ಮತ್ತು ಭಾರತದಲ್ಲಿನ **ಔಫಥ.**99.8 ಗಳಿಗೆ ಮಿಲಿಯನ್‌ಗಟ್ಟಲೆ ಉತ್ಪನ್ನಗಳನ್ನು ಡೆಲಿವರಿ ಮಾಡಲಾಗಿದೆ. ಕಳೆದ 24 ತಿಂಗಳುಗಳಲ್ಲಿ, ಔಫಥ. 50ಕ್ಕಿಂತ ಹೆಚ್ಚು ಅಮೆಜಾನ್ ಫ್ರೆಶ್ ಗ್ರಾಹಕರು ಹಂತ 2, 3 ಮತ್ತು ಸಣ್ಣ ನಗರಗಳವರಾಗಿದ್ದಾರೆ. 2022 ನಮಗೆ ಅತ್ಯಂತ ಉತ್ಸಾಹಕರ ದಿನವಾಗಿತ್ತು ಮತ್ತು ಹುಬ್ಬಳ್ಳಿ, ತ್ರಿವೇಂಡ್ರಮ್, ಕೊಚ್ಚಿ, ಚಂಡೀಗಢ, ಎನಧಿಯಾನ, ಅಂಗೋಲ್, ದುರ್ಗಾಪುರ ಮತ್ತು ಇನ್ನೂ ಹಲವು ಹಂತ 2 ಮತ್ತು 3 ರ 35 ಕ್ಕೂ ಹೆಚ್ಚು ನಗರಗಳಿಗೆ ನಾವು ತಾಜಾ ಹಣ್ಣುಗಳು ಮತ್ತು ತರಕಾರಿಗಳ ತಲುಪಿಸುವಿಕೆಯನ್ನು ವಿಸ್ತರಿಸಿದ್ದೇವೆ. ನಮ್ಮ ಗ್ರಾಹಕರ ಅಗತ್ಯಗಳನ್ನು ನಾವು ಕೇಳಿಸಿಕೊಳ್ಳುತ್ತಲೇ ಇದ್ದೇವೆ ಮತ್ತು ಸೂಪರ್ ಸೇವರ್ ಆಫರ್‌ಗಳು, ಬೈ ಮೋರ್ ಸೇವ್ ಮೋರ್ ಇತ್ಯಾದಿ ಕೊಡುಗೆಗಳನ್ನು ಪರಿಚಯಿಸಿದ್ದೇವೆ. ಈ ಮೂಲಕ ಗ್ರಾಹಕರ ಪ್ರತಿ ದಿನದ ಅಗತ್ಯಗಳಿಗೆ ಸರಿಯಾದ ಮೌಲ್ಯ ಒದಗಿಸುತ್ತಿದ್ದೇವೆ. ಭಾರತದ ಎಲ್ಲೆಡೆಗೂ ವಿಸ್ತರಿಸುವ ಗುರಿ ಹೊಂದಿದ್ದೇವೆ.

ಇತ್ತೀಚೆಗೆ ಬಿಡುಗಡೆ ಮಾಡಿದ, ಲೋಕಲ್ ಸರ್ಕಲ್ಸ್ ಸರ್ವೆ ಪ್ರಕಾರ, ಗುಣಮಟ್ಟ ಮತ್ತು ಸೇವೆಯಲ್ಲಿ ಅಮೆಜಾನ್ ಫ್ರೆಶ್ ಅತ್ಯುತ್ತಮ ಸ್ಥಾನದಲ್ಲಿದೆ. ಗ್ರಾಹಕರು ಈ ಎರಡರಲ್ಲೂ ಸಂತೃಪ್ತರಾಗುತ್ತಾರೆ ಎಂಬುದನ್ನು ನೀವು ಹೇಗೆ ಖಚಿತಪಡಿಸುತ್ತೀರಿ?

ನಾವು ಗ್ರಾಹಕರಿಗೆ ಹೆಚ್ಚಿನ ಆದ್ಯತೆ ನೀಡಿದ್ದೇವೆ ಮತ್ತು ಅವರಿಗೆ ಉತ್ತಮ ಆನ್‌ಲೈನ್ ಶಾಪಿಂಗ್ ಅನುಭವ ಒದಗಿಸಲು



ಗಮನ ಕೇಂದ್ರೀಕರಿಸಿದ್ದೇವೆ ಇತ್ತೀಚೆಗೆ ಬಿಡುಗಡೆ ಮಾಡಿದ ಲೋಕಲ್ ಸರ್ಕಲ್ಸ್ ಸಮೀಕ್ಷೆಯಲ್ಲಿ ಔಫಥ 50 ಗ್ರಾಹಕರು ತಮ್ಮ ಆನ್‌ಲೈನ್ ದಿನಸಿ ಖರೀದಿಯನ್ನು ಮೊದಲೇ ಯೋಜಿಸುತ್ತಾರೆ ಮತ್ತು ತಮ್ಮ ಅನುಕೂಲಕ್ಕೆ ಅನುಗುಣವಾದ ಡೆಲಿವರಿ ಸ್ಲಾಟ್ ಅನ್ನು ಅಪೇಕ್ಷಿಸುತ್ತಾರೆ ಎಂಬುದನ್ನು ಸ್ಪಷ್ಟವಾಗಿ ತಿಳಿಸಿದೆ. ಇದೇ ರೀತಿ, ಡೆಲಿವರಿ ವೇಗಕ್ಕೆ ಹೋಲಿಸಿದರೆ ಸೇವೆ, ಗುಣಮಟ್ಟ ಮತ್ತು ಮೌಲ್ಯವೂ ಪ್ರಮುಖ ಅಂಶಗಳಾಗಿವೆ. ತಮ್ಮ ಆದ್ಯತೆಯ ಕಾಲಾವಧಿಯಲ್ಲಿ ಶಾಪಿಂಗ್ ಮಾಡಲು ಅವರಿಗೆ ಅನುಕೂಲ ಒದಗಿಸುತ್ತಿದ್ದೇವೆ..

ಇದರ ಜೊತೆಗೆ, ಗ್ರಾಹಕರ ಒಳನೋಟಗಳನ್ನೂ ನಾವು ಪ್ರಮುಖವಾಗಿ ಪರಿಗಣಿಸಿದ್ದೇವೆ ಮತ್ತು ನಮ್ಮ ಇಂಟರ್‌ಫೇಸ್‌ನಲ್ಲಿ ಹೊಸ ಆಯ್ಕೆಗಳಾದ 'ಮತ್ತೊಮ್ಮೆ ಖರೀದಿಸಿ', ಹೊಸ ಪ್ರಾಡಕ್ಟ್‌ಗಳನ್ನು ಹೈಲೈಟ್ ಮಾಡುವುದು ಹಾಗೂ ಇತರ ಹಲವು ವೈಶಿಷ್ಟ್ಯಗಳನ್ನು ಸೇರಿಸಿದ್ದೇವೆ.

2023 ಕ್ಕೆ ನಾವು ಸಾಗುತ್ತಿರುವುದರಿಂದ ಈ ವರ್ಷದಲ್ಲಿ ದಿನಸಿ ವಹಿವಾಟಿನಲ್ಲಿ ಅಮೆಜಾನ್‌ನ ಯೋಜನೆ ಹೇಗಿದೆ?

ನಮ್ಮ ಗಮನ ಕೇಂದ್ರೀಕರಣ ಎಂದಿಗೂ ಗ್ರಾಹಕರ ಮೇಲಿದೆ ಮತ್ತು ದಿನಸಿ ಶಾಪಿಂಗ್ ನಮ್ಮ ಗ್ರಾಹಕರ ಪ್ರತಿ ದಿನದ ಜೀವನದ ಒಂದು ಅಂಗ ಎಂಬುದು ನಮಗೆ ತಿಳಿದಿದೆ. ತಾಜಾ ಹಣ್ಣು, ತರಕಾರಿಗಳು, ಫ್ರೋಜನ್ ಮತ್ತು ಚಿಲ್ಡ್ ಉತ್ಪನ್ನಗಳು, ಬ್ಯೂಟಿ, ಬೇಬಿ, ವೈಯಕ್ತಿಕ ಪ್ರಸಾದನ ಮತ್ತು ಸಾಕು ಪ್ರಾಣಿ ಆರೈಕೆ ಉತ್ಪನ್ನಗಳನ್ನು ಒದಗಿಸುವುದು ನಮ್ಮ ಗುರಿಯಾಗಿರುತ್ತದೆ. ನಮ್ಮ ವೆಟ್ ಗ್ರಾಸರಿ ಆಯ್ಕೆಯು ಈಗಾಗಲೇ 35 ಕ್ಕೂ ಹೆಚ್ಚು ನಗರಗಳಲ್ಲಿದೆ ಮತ್ತು ಉಳಿದ ನಗರಗಳಲ್ಲಿ ಗ್ರಾಹಕರು ಡ್ರೈ ಗ್ರಾಸರಿಗಳನ್ನು ಖರೀದಿ ಮಾಡಬಹುದು. ಭಾರತದಾದ್ಯಂತ ಫ್ರೆಶ್ ಅನ್ನು ಹಂತ ಹಂತವಾಗಿ ವಿಸ್ತರಿಸಲು ಯೋಜನೆ ಹೊಂದಿದ್ದೇವೆ. ಹೀಗಾಗಿ ನಮ್ಮ ಹೂಡಿಕೆಯು ಉತ್ತಮ ಮತ್ತು ಹೊಸತನದಿಂದ ಕೂಡಿದ ಶಾಪಿಂಗ್ ಅನುಭವವನ್ನು ನಮ್ಮ ಗ್ರಾಹಕರಿಗೆ ಒದಗಿಸುವುದರ ಮೇಲೆ ಗಮನ ಕೇಂದ್ರೀಕರಿಸಿದೆ.

# ಹೊಸ ಯುಪಿಎಸ್ ಇನ್ವೈಟರ್ & ಬ್ಯಾಟರಿ ಖರೀದಿಗೆ ದರಪಟ್ಟಿ ಆಹ್ವಾನ

ಕೊಪ್ಪಳ : ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕೊಪ್ಪಳ ಕಚೇರಿಗೆ ಹೊಸ ಯುಪಿಎಸ್ ಇನ್ವೈಟರ್ ಮತ್ತು ಬ್ಯಾಟರಿ ಖರೀದಿಸಲು ದರಪಟ್ಟಿ ಆಹ್ವಾನಿಸಲಾಗಿದೆ.

ಕೊಪ್ಪಳ ಜಿಲ್ಲೆಯ ಅರ್ಹ ಅಧೀಕೃತ ಏಜೆನ್ಸಿಯವರು ಎಲ್ಲಾ ತೆರಿಗೆಗಳು ಒಳಗೊಂಡಂತೆ ದರ ನಮೂದಿಸಿದ ದರಪಟ್ಟಿಯನ್ನು ಫೆಬ್ರವರಿ 09ರ ಸಂಜೆಯೊಳಗಾಗಿ ವಾರ್ತಾ ಇಲಾಖೆ ಕೊಪ್ಪಳ ಕಚೇರಿಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ವಾರ್ತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಿತ್ತೂರು ರಾಣಿ ಚನ್ನಮ್ಮ ಟ್ರೋಫಿ ಥ್ರೋ ಬಾಲ್ ಪಂದ್ಯಾವಳಿಗೆ ಚಾಲನೆ

ಖಾನಾಪುರ: ಇಲ್ಲಿನ ಮಲಪ್ರಭಾ ಮೈದಾನದಲ್ಲಿ ಖಾನಾಪುರದ ಯುವ ಸಮಿತಿ ಸಹಯೋಗದಲ್ಲಿ ನಿಯತಿ ಫೌಂಡೇಷನ್ ವತಿಯಿಂದ ಆಯೋಜಿಸಲಾದ ಕಿತ್ತೂರು ರಾಣಿ ಚನ್ನಮ್ಮ ಟ್ರೋಫಿ ಥ್ರೋ ಬಾಲ್ ಪಂದ್ಯಾವಳಿಗೆ ಫೌಂಡೇಷನ್ ನ ಮುಖ್ಯಸ್ಥೆ, ಬಿಜೆಪಿ ನಾಯಕಿ ಡಾ. ಸೋನಾಲಿ ಸರ್ನೋಬತ್ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ "ಡಾ. ಸೋನಾಲಿ ಸರ್ನೋಬತ್, ನಿಯತಿ ಫೌಂಡೇಶನ್ ಯಾವಾಗಲೂ ಮಹಿಳಾ ಸಬಲೀಕರಣ ಮತ್ತು ಯುವ ಪ್ರೇರಣೆಯ ಕಾರ್ಯಗಳಿಗೆ ಒತ್ತು ನೀಡಿ ಮುನ್ನಡೆಯುತ್ತಿದೆ. ಇದು ಯುವಕರಲ್ಲಿ ಆತ್ಮಶಕ್ತಿ ಮತ್ತು ರಾಷ್ಟ್ರಭಕ್ತಿಯನ್ನು ಪ್ರತಿಜ್ಞೆ ಮಾಡುತ್ತದೆ" ಎಂದರು.

ಶ್ರೀ ಶಾಂಡಿಲ್ಯೇಶ್ವರ ಸ್ವಾಮೀಜಿ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿದ್ದರು.



ಬಾಲಕಿಯರ 16 ತಂಡಗಳು ಪಂದ್ಯಾವಳಿಯಲ್ಲಿ ಭಾಗವಹಿಸಿದ್ದವು. ನಿಯತಿ ಫೌಂಡೇಶನ್ ಪ್ರಾಯೋಜಿತ, ಪ್ರಥಮ ಸ್ಥಾನ ಪಡೆದ ತಂಡ–ಕ್ಕೆ 7001 ರೂ., ದ್ವಿತೀಯ 5000 ರೂ. ಹಾಗೂ ತೃತೀಯ ಸ್ಥಾನ ಪಡೆದ ತಂಡಕ್ಕೆ 3000ರೂ. ನಗದು ಬಹುಮಾನ, ಭಾಗವಹಿಸಿದ ಎಲ್ಲ ಕ್ರೀಡಾಳುಗಳಿಗೆ ಪ್ರಮಾಣಪತ್ರಗಳನ್ನು ನೀಡಲಾಯಿತು.

ಆನಂದ ಪಾಟೀಲ, ಬಾಳೇಶ ಚವಣ್ಣವರ, ಅನಿತಾ ಕೋಲಮಸ್ಕರ್, ಭೀಮಸೇನ ಅಗಸರ್, ಅನಸೂಯಾ ಅಗಸರ, ವಿಕಾಸ ವಡ್ಡರ ಉಪಸ್ಥಿತರಿದ್ದರು. ಡಾ. ಸೋನಾಲಿ ಸರ್ನೋಬತ್ ಕ್ರೀಡಾಳು ವಿದ್ಯಾರ್ಥಿನಿಯರೊಂದಿಗೆ ಸ್ವತಃ ಥ್ರೋಬಾಲ್ ಆಡಿ ಪ್ರೋತ್ಸಾಹಿಸಿದರು.

# ಗೋವಾವನ್ನು ಆಧ್ಯಾತ್ಮಿಕ ಪ್ರವಾಸೋದ್ಯಮದೊಂದಿಗೆ ಸಂಪರ್ಕಿಸಲು ಆದ್ಯತೆ



ಪಣಜಿ: ಗೋವಾ ಮುಖ್ಯಮಂತ್ರಿ ಡಾ. ಪ್ರಮೋದ್ ಸಾವಂತ್ ಅವರು ಉತ್ತರಾಖಂಡ್ ಪ್ರವಾಸದಲ್ಲಿದ್ದು, ಅಲ್ಲಿನ ಸಂತರನ್ನು ಭೇಟಿ ಮಾಡಿದ್ದಾರೆ.

ಗೋವಾದಲ್ಲಿ ಆಧ್ಯಾತ್ಮಿಕ ಪ್ರವಾಸೋದ್ಯಮವನ್ನು ಉತ್ತೇಜಿಸುವ ಉದ್ದೇಶದಿಂದ ಮುಖ್ಯಮಂತ್ರಿ ಸಾವಂತ್ ಅವರು ಭೇಟಿ ನೀಡಿದ್ದಾರೆ ಎಂದು ತಿಳಿದುಬಂದಿದೆ.

ಇಲ್ಲಿನ ಪತಂಜಲಿ ಕೇಂದ್ರಕ್ಕೆ ಭೇಟಿ ನೀಡಿದ ನಂತರ ಮುಖ್ಯಮಂತ್ರಿ ಡಾ. ಪ್ರಮೋದ್ ಸಾವಂತ್, "ದೇವರ ನಾಡಿಗೆ ಬಂದ ನಂತರ ನನಗೆ ತುಂಬಾ ಸಂತೋಷವಾಗಿದೆ. ನಾನು ಮೊದಲು ಪತಂಜಲಿ ತಲುಪಿದೆ. ಯೋಗ ಗುರು ಬಾಬಾ ರಾಮ್ದೇವ್ ಅವರನ್ನು ಭೇಟಿ ಮಾಡಿದ್ದೇನೆ.

ಯೋಗಾಸನದ ಜೊತೆಗೆ ಯೋಗಾಸನ ಸಂಶೋಧನಾ ಕೇಂದ್ರಕ್ಕೂ ಭೇಟಿ ನೀಡಿದ್ದೇನೆ. ಯೋಗ ಉತ್ಸವವು ಗೋವಾದಲ್ಲಿ ಫೆಬ್ರವರಿ 18, 19 ಮತ್ತು 20 ರಂದು ಗೋವಾದ ಮಿರಾಮರ್ ಬೀಚ್ನಲ್ಲಿ ನಡೆಯಲಿದೆ. ಇದಕ್ಕಾಗಿ ಯೋಗ ಗುರು ಬಾಬಾ ರಾಮದೇವ್ ಅವರನ್ನು ಆಹ್ವಾನಿಸಲಾಗಿದೆ.

"ನಾವು ಗೋವಾವನ್ನು ಆಧ್ಯಾತ್ಮಿಕ ಪ್ರವಾಸೋದ್ಯಮದೊಂದಿಗೆ ಸಂಪರ್ಕಿಸಲು ಬಯಸುತ್ತೇವೆ. ಗೋವಾದಲ್ಲಿ ಸಮುದ್ರ ಪ್ರವಾಸೋದ್ಯಮ ಈಗಾಗಲೇ ಅಸ್ತಿತ್ವದಲ್ಲಿದೆ. ನಾವು ಗೋವಾದಲ್ಲಿ ಆಧ್ಯಾತ್ಮಿಕ ಆರೋಗ್ಯ ಮತ್ತು ವೈದ್ಯಕೀಯ ಪ್ರವಾಸೋದ್ಯಮವನ್ನು ಉತ್ತೇಜಿಸಲು ಬಯಸುತ್ತೇವೆ" ಎಂದು ಜುನಾ ಅಖಾರಾದ ಆಚಾರ್ಯ ಮಹಾಮಂಡಲೇಶ್ವರ ಅವಧೇಶಾನಂದ ಗಿರಿಯನ್ನು ಭೇಟಿಯಾದ ನಂತರ ಗೋವಾ ಮುಖ್ಯಮಂತ್ರಿ ಪ್ರಮೋದ ಸಾವಂತ್ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ್ದಾರೆ.

ಈ ಭೇಟಿಯ ಚಿತ್ರಗಳನ್ನೂ ಮುಖ್ಯಮಂತ್ರಿಗಳು ಸಾಮಾಜಿಕ ಜಾಲತಾಣಗಳ ಮೂಲಕ ಬಿಡುಗಡೆ ಮಾಡಿದ್ದಾರೆ. ಈ ಭೇಟಿಯಲ್ಲಿ ಭಾರತೀಯ ಸಂಸ್ಕೃತಿಗೆ ಅನುಗುಣವಾಗಿ ಶೈಕ್ಷಣಿಕ ಮೂಲಸೌಕರ್ಯ ಮತ್ತು ಶಿಕ್ಷಣ ವ್ಯವಸ್ಥೆಯಿಂದ ಪ್ರಭಾವಿತನಾಗಿದ್ದೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ. ಗುರುಕುಲಂ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ವಿದ್ಯಾರ್ಥಿಗಳಲ್ಲಿ ಇದ್ದ ಉತ್ಸಾಹ, ಶ್ರದ್ಧೆ ಕಂಡು ಖುಷಿಯಾಯಿತು ಎಂದು ಮುಖ್ಯಮಂತ್ರಿಗಳು ಹೇಳಿದ್ದಾರೆ.

# ದಾಖಲೆ ಬೆಲೆಗೆ ಮಾರಾಟವಾದ ವೀಳ್ಯದೆಲೆ

ಕೊರಟಗೆರೆ: ತಾಲೂಕಿನ ತೋವಿನಕೆರೆ ಸಂತೆಯಲ್ಲಿ ವೀಳ್ಯದೆಲೆ ಕಟ್ಟಿಗೆ 160 ರೂಗಳ ದಾಖಲೆ ಬೆಲೆಗೆ ಮಾರಾಟವಾಗಿ ದಾಖಲೆ ನಿರ್ಮಿಸಿದ್ದು, ಇದುವರೆಗೂ ಈ ಬೆಲೆ ತಲುಪಿರಲಿಲ್ಲ, ಮಧುಗಿರಿ ತಾಲೂಕಿನ ಲಿಂಗಸಂದ್ರದ ಬೆಳೆಗಾರ ನಟರಾಜು ಸಂತೆಗೆ ತಂದಿದ್ದ ವೀಳ್ಯದೆಳೆ ಇದುವರೆಗೂ ಇಷ್ಟೊಂದು ದರಕ್ಕೆ ವೀಳ್ಯದೆಲೆ ಬೆಲೆ ಏರಿಕೆ ಯಾಗಿ ಹೆಚ್ಚಿನ ಬೆಲೆಗೆ ಮಾರಾಟವಾಯಿತು.

ತುಮಕೂರು ಜಿಲ್ಲೆ ಕೊರಟಗೆರೆ ತಾಲೂಕಿನ ತೋವಿನಕೆರೆ ಸಂತೆಯಲ್ಲಿ ವೀಳ್ಯದೆಳೆ ಮಾರಾಟ ಹಲವು ದಶಕಗಳಿಂದ ನಡೆಯುತ್ತಿದೆ, ಮಧುಗಿರಿ ತಾಲೂಕು ದೊಡ್ಡೇರಿ ಹೋಬಳಿ, ತೋವಿನಕೆರೆ ಸುತ್ತಮುತ್ತಲಿನ ಪ್ರದೇಶಗಳ ವೀಳ್ಯದೆಲೆ ಬೆಳೆಯುವ ರೈತರು ಪ್ರತಿ ವಾರ ತೋವಿನಕೆರೆ ಸಂತೆಗೆ ತಂದು ಗ್ರಾಹಕರಿಗೆ ನೇರವಾಗಿ ಮಾರಾಟ ಮಾಡುತ್ತಾರೆ, ಬೆಳೆಗಾರರು ಕಟ್ಟಿನಲ್ಲಿ ನೂರು ಎಲೆಗಳಿಗಿಂತ ಹೆಚ್ಚು ವೀಳ್ಯೆದೆಲೆ ಇಟ್ಟಿರುತ್ತಾರೆ, ಕಡಿಮೆಯಿರುವುದಿಲ್ಲ, ವೀಳ್ಯೆದೆಲೆ ಸಂಖ್ಯೆಯಲ್ಲಿ ಸುಳ್ಳು ಹೇಳಬಾರದು ಎಂದು ಬಲವಾದ ನಂಬಿಕೆ ಈ ಭಾಗದ ವೀಳ್ಯದೆಲೆ ಬೆಳೆಗಾರರಲ್ಲಿದೆ ಅದೇ ರೀತಿ ಇಂದಿಗೂ ನಡೆದುಕೊಂಡು ಬರುತ್ತಿದ್ದಾರೆ.

ಬೇರೆ ಮಾರುಕಟ್ಟೆಗಳಲ್ಲಿ ಕಟ್ಟಿನಲ್ಲಿ ಕಡಿಮೆ ಇಟ್ಟು ಮಾರುವುದು ಸಾಮಾನ್ಯ, ಆದರೆ ತೋವಿನಕೆರೆ ಸಂತೆಯಲ್ಲಿ ವೀಳ್ಯದೆಲೆ ಉತ್ತಮ ಹೆಸರು ಬರಲು ಮುಖ್ಯ ಕಾರಣ ಇದೇ, ಎನ್ನುತ್ತಾರೆ ಹಿರಿಯ ಕೃಷಿಕರು, ಶಿರಾ, ಮಧುಗಿರಿ, ಕೊಡಿಗೇನಹಳ್ಳಿ, ಗುಬ್ಬಿ, ತುಮಕೂರು, ಚೇಳೂರು ಹಾಗೂ ಆಂದ್ರಪ್ರದೇಶ ರಾಜ್ಯದ ಹಿಂದೂಪುರ ದಿಂದಲೂ ಖರೀದಿದಾರರು ತೋವಿನಕೆರೆ ಸಂತೆಗೆ ಬರುತ್ತಾರೆ, ಅಂಗಡಿಗಳಲ್ಲಿ ಚಿಲ್ಲದೆ ಮಾರಾಟಗಾರರು 200–220 ರೂಗಳಿಗೆ ಒಂದು ಕಟ್ಟು ಮಾರಾಟ ಮಾಡುತ್ತಿದ್ದಾರೆ, ತುಮಕೂರು ಜಿಲ್ಲೆಯ ತೋವಿನಕೆರೆ ವೀಳ್ಯೆದೆಲೆ ಸಂತೆಯಲ್ಲಿ ಬೆಳೆಗಾರರೇ ನೇರವಾಗಿ ಗ್ರಾಹಕರಿಗೆ ಮತ್ತು ಮರ್ಧವರ್ತಿಗಳಿಗೆ ಮಾರಾಟ ಮಾಡುವುದು ಹಲವು ದಶಕಗಳಿಂದ ನಡೆಯುತ್ತಿದೆ.



ಇಲ್ಲಿನ ಕಟ್ಟುಗಳಲ್ಲಿ ನೂರು ಎಲೆಗಳಿಗಿಂತ ಹೆಚ್ಚು ಇರುತ್ತವೆ, ಕಡಿಮೆ ಇಟ್ಟುಮಾರಾಟ ಮಾಡುವುದಿಲ್ಲವೆಂದು ಬೇರೆ ಸ್ಥಳದ ಗ್ರಾಹಕರು ನಂಬಿದ್ದಾರೆ, ಸಂತೆಯಲ್ಲಿ ಬೆಳಿಗ್ಗೆ 7 ಗಂಟಗೆ ಪ್ರಾರಂಭವಾಗುವ ವೀಳ್ಯದೆಲೆ ಮತ್ತೆ 10 ಗಂಟೆಗೆ ಮುಕ್ತಾಯವಾಗುತ್ತದೆ.

ವೀಳ್ಯದೆಲೆ ಬೆಳೆಗಾರ ಲಿಂಗಸಂದ್ರ ನಟರಾಜು ಬೆಲೆ ಹೆಚ್ಚಳದ ಬಗ್ಗೆ ಮಾಹಿತಿ ನೀಡಿ ಜನವರಿ ತಿಂಗಳ ಸಂತೆಯಲ್ಲಿ 100 ರೂಗಳ ಗಡಿ ದಾಟಿ ಮಾರಾಟವಾದರೆ ಫೆಬ್ರವರಿ ಮೊದಲವಾರ 160 ರೂಗಳು ತಲುಪಿದೆ, ಸಂತೆಯಲ್ಲಿ ಅತಿ ಕಡಿಮೆ ಬೆಲೆಗೆ ಮಾರಾಟವಾದ ವೀಳ್ಯದೆಲೆ ಎಂದರೆ 140 ರೂಗಳು, ವೀಳ್ಯದೆಲೆ ಬೆಲೆ ಹೆಚ್ಚಾಗಲು ಕಾರಣ ಹಬ್ಬಗಳು, ಜಾತ್ರೆಗಳು, ಮದುವೆಗಳು ಹೆಚ್ಚಾಗಿ ನಡೆಯುತ್ತಿದ್ದು ಈ ಸಂಪ್ರದಾಯದ ಕಾರ್ಯಕ್ರಮಗಳಿಗೆ ವೀಳ್ಯದೆಲೆ ಅವಶ್ಯಕ ವಸ್ತುವಾದ ಹಿನ್ನಲೆ ಹೆಚ್ಚು ಬೇಡಿಕೆ ಇರುವುದರಿಂದ ಹಾಗೂ ಚಳಿಯ ಕಾರಣದಿಂದ ವೀಳ್ಯದೆಲೆ ಇಳುವರಿ ಕಡಿಮೆಯಾಗಿದೆ.

ಕಳೆದ ವರ್ಷ ಬಿದ್ದ ಮಳೆಯು ಇಳುವರಿ ಮೇಲೆ ಪರಿಣಾಮ ಬೀರಿದೆ, ವೀಳ್ಯದೆಲೆ ತೋಟಗಳಲ್ಲಿ ಶೇ. 70 ರಷ್ಟು ಇಳುವರಿ ಕಡಿಮೆಯಾಗಿದೆ, 100 ಪೆಂಡಿ ಬರುವ ಜಾಗದಲ್ಲಿ ಕೇವಲ 30 ಪೆಂಡಿ ವೀಳ್ಯದೆಲೆ ಬರುತ್ತಿಲ್ಲ ಈ ಹಿನ್ನೆಲೆಯಲ್ಲಿ ಬೆಲೆ ಹೆಚ್ಚಾಗಿದೆ ಎಂದು ಅಬಿಪ್ರಾಯತಿಳಿಸಿದರು.

## ಜಿಲ್ಲಾ ಮುಖ್ಯೋಪಾದ್ಯಯರ ಸಂಘಕ್ಕೆ ಕಾರ್ಯದರ್ಶಿಯಾಗಿ ನೇಮಕ



ಮುರಗೋಡ: ಬೆಳಗಾವಿ ದಕ್ಷಿಣ ಜಿಲ್ಲಾ ಪ್ರಾಥಮಿಕ ಶಾಲಾ ಮುಖ್ಯೋಪಾದ್ಯಯರ ಸಂಘದ 2022–23ನೇ ಸಾಲಿನ ಜಿಲ್ಲಾ ಮಟ್ಟದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದ್ದು, ಮುರಗೋಡ ಹೊರಟ್ಟಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಶ್ರೀಕಾಂತ ಪಟಾತರ ಅವರನ್ನು ಜಿಲ್ಲಾ ಕಾರ್ಯದಶಿಯನ್ನಾಗಿ ನೇಮಕ ಮಾಡಲಾಗಿದೆ. ರಾಜ್ಯಾಧ್ಯಕ್ಷ ಕೆ. ಕೃಷ್ಣಪ್ಪ ಆದೇಶ ಹೊರಡಿಸಿದ್ದಾರೆ.

# ಗುರುಪಾದ ಪೂಜೆ



ಮುರಗೋಡ: ಶ್ರೀ ನೀಲಕಂಠ ಸ್ವಾಮಿಗಳ ಅಮೃತ ಮಹೋತ್ಸವ ನಿಮಿತ್ತ ಸೋಮವಾ ರಾತ್ರಿ ಮಹಾಂತೇಶ್ವರ ಮಠದ ಆವರಣದಲ್ಲಿ ಹಮ್ಮಿಕೊಂಡಿದ್ದ ಧಾರ್ಮಿಕ ಕಾರ್ಯಕ್ರಮದಲ್ಲಿ ಶಿವಾನಂದ ಕಾಜಗಾರ, ಪ್ರವೀಣ ಕಾಜಗಾರ, ಪ್ರವೀಣ ಕಾಜಗಾರ ದಂಪತಿ ವತಿಯಿಂದ ದಾಸೋಹ ಹಾಗೂ ಕಾಂಡ ಸೇವೆ ಸಲ್ಲಿಸಿ ಗುರುಪಾದ ಪೂಜೆ ನೆರವೇರಿಸಲಾಯಿತು.

ಕೀರ್ತಿ ಕಾಜಗಾರ, ವಿನಾಯಕ ಕಾಜಗಾರ, ಐಸಿರಿ ಕಾಜಗಾರ, ಮಹಾಂತೇಶ ಬೆಟ್ಟದ, ಯಶವಂತ ಪಾಟೀಲ, ಶ್ರೀಶೈಲ ಹಿರೇಮಠ, ಪಾಠಶಾಲಾ ವಿದ್ಯಾರ್ಥಿಗಳು ಇನ್ನಿತರರು ಇದ್ದರು.

# ಜಕ್ಕಮ್ಮಾದೇವಿ ಜಾತ್ರಾ ಮಹೋತ್ಸವ





ಮುಗಳಖೋಡ: ರಾಯಬಾಗ ತಾಲೂಕಿನ ಸುಕ್ಷೇತ್ರ ಕಟಕಬಾವಿ ಗ್ರಾಮದ ಪಿಡಾಯಿ ತೋಟದಲ್ಲಿ 4ನೇ ವರ್ಷದ ಜಕ್ಕಮ್ಮಾದೇವಿ ಹಾಗೂ ಶ್ರೀ ಧರಿದೇವರ ಪುಣ್ಯಾಶ್ರಮದ ವೇದಾಂತ ಪರಿಷತ್ ಹಾಗೂ ಜಾತ್ರಾ ಮಹೋತ್ಸವ ಕಾರ್ಯಕ್ರಮ ಇದೆ ಫೆಬ್ರುವರಿ 09 ರಿಂದ 13 ರರವರೆಗೆ 5 ದಿನಗಳ ಕಾಲ ವಿಜೃಂಭಣೆಯಿಂದ ಜರುಗುವುದು.

ಪರಮಪೂಜ್ಯ ಶ್ರೀ ಅಭಿನವ ಧರೇಶ್ವರ ಮಹಾಸ್ವಾಮಿಗಳು ಶ್ರೀ ಜಕ್ಕಮ್ಮದೇವಿ ಹಾಗೂ ಶ್ರೀ ಧರಿದೇವರ ಪುಣ್ಯಾಶ್ರಮ ಕಟಕಬಾವಿ ಇವರ ದಿವ್ಯ ಸಾನಿಧ್ಯದಲ್ಲಿ ಸರ್ವ ಕಾರ್ಯಕ್ರಮಗಳು ಜರುಗುವವು.

ಕಾರ್ಯಕ್ರಮಗಳ ವಿವರ: ಗುರುವಾರ ದಿನಾಂಕ 09 ರಂದು ಮುಂಜಾನೆ 7 ಗಂಟೆಗೆ ಧ್ವಜಾರೋಹಣ, ಅದೇ ದಿನ ಪಲ್ಲಕ್ಕಿಗಳು ಶ್ರೀ ಸುಕ್ಷೇತ್ರ ರಾಮನಕಟ್ಟಿಗೆ ಸ್ನಾನಕ್ಕೆ ಹೋಗುವವು. ಸಾಯಂಕಾಲ 6 ಗಂಟೆಗೆ ಪೂಜ್ಯ ಮಹಾತ್ಮರಿಂದ ಪ್ರವಚನ ಕಾರ್ಯಕ್ರಮ ಜರುಗುವುದು. ಶುಕ್ರವಾರ 10 ರಂದು ಪ.ಪೂ. ಶ್ರೀ ಅಭಿನವ ಧರೇಶ್ವರ ಮಹಾಸ್ವಾಮಿಗಳ ಕಿರೀಟ ಪೂಜಾ ಕಾರ್ಯಕ್ರಮ, ಚಿಂತನ ಗೋಷ್ಠಿಯ ವಿಷಯಗಳು ಪ್ರಸ್ತಾಪ.

ನಂತರದ ದಿನಗಳಲ್ಲಿ ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮ, ಜಂಗಿ ನಿಕಾಲಿ ಕುಸ್ತಿಗಳು, ಟಗರಿನ ಕಾಳಗ, ಸ್ವಾಮಿಗಳ ತುಲಾಭಾರ ಸೇರಿದಂತೆ ಡೊಳ್ಳಿನ ಗಾಯನ ಹಾಗೂ ಸಕಲ ಜನಪದ ಗಾಯನಗಳು ನಡೆಯುವವು ಎಂದು ಕಮಿಟಿಯವರು ತಿಳಿಸಿದ್ದಾರೆ.

# ನಿಧನ ವಾರ್ತೆ



**ಮಲ್ಲವ್ವಾಕದಮ**

ಗೋಕಾಕ: ಪಟ್ಟಣದ ಎಪಿಎಂಸಿ ಹತ್ತಿರದಗಾಂಧಿ ನಗರದ ನಿವಾಸಿ ಮಲ್ಲವ್ವಗಣಪತಿಕದಮ(80) ಅನಾರೋಗ್ಯದಿಂದ ನಿಧನರಾಗಿದ್ದಾರೆ. ಅವರಿಗೆಓರ್ವ ಪುತ್ರಿ ಸೇರಿದಂತೆಅಪಾರ ಬಂಧು ಬಳಗ ಇದ್ದಾರೆ.


# ಮುತ್ನಾಳ ಕ್ಷೇತ್ರದಲ್ಲಿ ಭಗವಾನ ಬಾಹುಬಲಿ ಪ್ರತಿಮೆಯ ಪ್ರತಿಷ್ಠಾಪನೆ

ಬೆಳಗಾವಿ : ಬೆಳಗಾವಿಯ ತಾಲೂಕಿನ ಮುತ್ನಾಳ ಗ್ರಾಮಕ್ಕೆ ಹೊಂದಿಕೊಂಡಿರುವ ಶ್ರೀ ಕ್ಷೇತ್ರ ಕಾಂಚನಶೃತಿ ವಿದ್ಯಾಸಂಸ್ಥೆ ಅಹಿಂಸಾ ಕ್ಷೇತ್ರದಲ್ಲಿ ಇತ್ತಿಚಿಗೆ ಭಗವಾನ ಶ್ರೀ ಬಾಹುಬಲಿಯ ಭವ್ಯವಾದ ಪ್ರತಿಮೆಯನ್ನು ಪ್ರತಿಷ್ಠಾಪಿಸಲಾಯಿತು.

ಕರ್ನಾಟಕದ ಶ್ರವಣಬೆಳಗೊಳ, ಕಾರ್ಕಳ, ಧರ್ಮಸ್ಥಳ, ವೇಣೂರು, ಗೊಮ್ಮಟಗಿರಿ, ಕನಕಗಿರಿ, ಕ್ಷೇತ್ರಗಳಲ್ಲಿ ಭಗವಾನ ಬಾಹುಬಲಿ ಪ್ರತಿಮೆಗಳನ್ನು ಪ್ರತಿಷ್ಠಾಪಿಸಲಾಗಿದೆ.

ಉತ್ತರ ಕರ್ನಾಟಕ ಮತ್ತು ದಕ್ಷಿಣ ಮಹಾರಾಷ್ಟ್ರದಲ್ಲಿ ಈ ತರಹದ ಯಾವುದೇ ಪ್ರತಿಮೆಗಳು ಪ್ರತಿಷ್ಠಾಪನೆ ಆಗಿರಲಿಲ್ಲ. ಇದೀಗ ಕರ್ನಾಟಕ, ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳ ಗಡಿಯನ್ನು ಹಂಚಿಕೊಂಡಿರುವ ಬೆಳಗಾವಿ ತಾಲೂಕಿನ ಮುತ್ನಾಳ ಗ್ರಾಮದ ಕ್ಷೇತ್ರದಲ್ಲಿ ಭಗವಾನ ಬಾಹುಬಲಿ ಪ್ರತಿಮೆ ಪ್ರತಿಷ್ಠಾಪನೆಯಾಗುತ್ತಿರುವುದು ಈ ಭಾಗದ ಜೈನ ಸಮಾಜದಲ್ಲಿ ಹರ್ಷದ ವಾತಾವರಣ ಮೂಡಿಸಿದೆ.

ಬೆಂಗಳೂರಿನ ಬಿ.ಎಸ್.ನೆಮೇಶ ಮತ್ತು ಶ್ರೀಮತಿ ಜಿ,.ಎನ್. ಮೀನ ಅವರ ಏಕೈಕ ಪುತ್ರಿ ಕುಮಾರಿ ಬಿ.ಎನ್. ನಿಶ್ಮಿತ ಅವರು ಚಿಕ್ಕ ವಯಸ್ಸಿನಲ್ಲಿ ಅಕಾಲಿಕ ಸ್ವರ್ಗಸ್ಥ



ಹೊಂದಿದ್ದಾರೆ.

ಈ ಕಾರಣ ನೆಮೇಶ ಮತ್ತು ಮೀನಾ ದಂಪತಿಗಳು ತಮ್ಮ ಪುತ್ರಿಯ ನೆನಪಿನಲ್ಲಿ, ಮತ್ತು ಆತ್ಮಶಾಂತಿಗಾಗಿ ಭಗವಾನ ಬಾಹುಬಲಿ ಪ್ರತಿಮೆಯನ್ನು ಪ್ರತಿಷ್ಠಾಪಿಸುವ ಸಂಕಲ್ಪವನ್ನು ಮಾಡಿದ್ದರು.

ಈ ಹಿನ್ನಲೆಯಲ್ಲಿ ಬೆಳಗಾವಿಯ ಮುತ್ನಾಳ ಗ್ರಾಮದ ಶ್ರೀ ಕ್ಷೇತ್ರ ಕಾಂಚನಶೃತಿ ವಿದ್ಯಾಸಂಸ್ಥೆ ಅಹಿಂಸಾ ಕ್ಷೇತ್ರದಲ್ಲಿ ಭಗವಾನ ಬಾಹುಬಲಿ ಪ್ರತಿಮೆಯನ್ನು ಪ್ರತಿಷ್ಠಾಪಿಸಲಾಗಿದೆ.

ಪ್ರತಿಮೆ ಸ್ಥಾಪನೆಗೆ ಪ.ಪೂ.ಕಾಂಚನಶ್ರೀ ಮಾತಾಜಿಗಳು, ಸಂಸ್ಥೆಯ ಅಧ್ಯಕ್ಷರಾದ ಪಾರೇಶ ಹುಕ್ಕೇರಿ, ಕಾರ್ಯದರ್ಶಿ ರಾಜೇಂದ್ರ ಪಾಟೀಲ ಅವರು ಸಹಕರಿಸಿ ಎಲ್ಲ ರೀತಿಯ ಸಹಕಾರವನ್ನು ನೀಡಿದ್ದಾರೆ.

ಮುತ್ನಾಳ ಗ್ರಾಮದಲ್ಲಿ ಇದೀಗ ಪ್ರತಿಷ್ಠಾಪನೆಗೊಂಡ ಭಗವಾನ ಬಾಹುಬಲಿ ಪ್ರತಿಮೆಯನ್ನು ಬಿಡದಿ ಬಳಿ ಮಾಡಲಾಗಿದೆ. ಅಶೋಕ ಗುಡಿಗಾರ ಅವರು ಕೆತ್ತನೆ ಕೆಲಸವನ್ನು ಮಾಡಿದ್ದು, 21 ಅಡಿ ಎತ್ತರದ ಈ ಪ್ರತಿಮೆಯನ್ನು ಅಶೋಕ ಗುಡಿಗಾರ ಅವರು ಕೆತ್ತನೆ ಕೆಲಸವನ್ನು ಮಾಡಿದ್ದು, ಅಂದಾಜು 40 ಟನ್ ಭಾರಹೊಂದಿದೆ.

ಈ ಪ್ರತಿಮೆಯ ಪಂಚಕಲ್ಯಾಣ ಮಹೋತ್ಸವ ಮತ್ತು ಭಗವಾನ ಬಾಹುಬಲಿ ಮಸ್ತಾಕಾಭಿಷೇಕ ಕಾರ್ಯಕ್ರಮಗಳು ಮಾರ್ಚ 13 ರಿಂದ 17 ರವರೆಗೆ ನಡೆಯಲಿವೆ.

ಈ ಪಂಚಕಲ್ಯಾಣ ಮಹೋತ್ಸವ ಮತ್ತು ಮಸ್ತಕಾಭಿಷೇಕದ ಎಲ್ಲ ಖರ್ಚುಗಳನ್ನು ಪ್ರತಿಮೆ ಪ್ರತಿಷ್ಠಾಪಕರಾದ ಬಿ.ಎಸ್.ನೆಮೇಶ ಮತ್ತು ಅವರ ಪತ್ನಿ ಜಿ.ಎನ್.ಮೀನ ಅವರು ವಹಿಸಿಕೊಂಡಿದ್ದಾರೆ ಸಂಸ್ಥೆಯ ಅಧ್ಯಕ್ಷ ಪಾರೇಶ ಹುಕ್ಕೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುರಿ ಮತ್ತು ಮೇಕೆಗಳ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಡಿ ಅರ್ಜಿ ಆಹ್ವಾನ

ಕೊಪ್ಪಳ : ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ(ನಿ) ಕೊಪ್ಪಳ ವತಿಯಿಂದ 2022–23ನೇ ಸಾಲಿನ (10+1) ಕುರಿ ಮತ್ತು ಮೇಕೆಗಳ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಡಿಯಲ್ಲಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದಿಂದ 2022–23ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನಡಿ ವಿಶೇಶ ಘಟಕ ಯೋಜನೆ ಗಿರಿಜನ ಉಪಯೋಜನೆ ಮತ್ತು ಸಾಮಾನ್ಯ ಯೋಜನೆಡಿಯಲ್ಲಿ ಜಿಲ್ಲಾವಾರು ಪರಿಶಿಷ್ಟ ಜಾತಿಗೆ 05, ಪರಿಶಿಷ್ಠ ಪಂಗಡಕ್ಕೆ 01 ಮತ್ತು ಸಾಮಾನ್ಯ (ಇತರೆ) ವರ್ಗಕ್ಕೆ 28 ಗುರಿಗಳನ್ನು ನಿಗದಿ ಪಡಿಸಿದ್ದು.

ಕೊಪ್ಪಳ ಜಿಲ್ಲೆಯಲ್ಲಿ ನೋಂದಣೆಯಾದ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘದಲ್ಲಿನ ಸದಸ್ಯರುಗಳಾದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಸಾಮಾನ್ಯ (ಇತರೆ) ಫಲಾನುಭವಿಗಳು ಫೆಬ್ರವರಿ 06 ರಿಂದ ಫೆ.15 ರೂಳಗೆ ನಿಗದಿತ ಅರ್ಜಿಗಳನ್ನು ಸಹಾಯಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಕೊಪ್ಪಳರವರ ಕಛೇರಿಯಿಂದ ಪಡೆದುಕೊಂಡು ಅರ್ಹ ದಾಖಲಾತಿಗಳೊಂದಿಗೆ ಫೆ. 15ರ ಸಂಜೆ 5.30 ಗಂಟೆಯೊಳಗಾಗಿ ಸಲ್ಲಿಸಬೇಕು.

ಈ ಯೋಜನೆಯ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅನುಷ್ಠಾಧಿಕಾರಿಗಳು/ ಸಹಾಯಕ ನಿರ್ದೇಶಕರು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ ಕೊಪ್ಪಳ ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ನಿಗಮದ ಕೊಪ್ಪಳ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಕಾರ ಸಂಘಗಳು/ಸೌಹಾರ್ದ ಸಹಕಾರಿಗಳಿಗೆ ಲೆಕ್ಕಪರಿಶೋಧನೆ ಪೂರೈಸಲು ಆದೇಶ

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಕಾರ ಸಂಘಗಳು/ಸೌಹಾರ್ದ ಸಹಕಾರಿಗಳು ಕಡ್ಡಾಯವಾಗಿ ಲೆಕ್ಕಪರಿಶೋಧನೆಯನ್ನು ನಿಗದಿತ ಅವಧಿಯೊಳಗೆ ಪೂರೈಸಬೇಕಾಗಿರುತ್ತದೆ.

ಕೆಲವು ಸಂಘಗಳು ಲೆಕ್ಕಪರಿಶೋಧಕರನ್ನು ಆಯ್ಕೆಮಾಡಿಕೊಳ್ಳದಿರುವುದು ಕಂಡು ಬಂದಿರುತ್ತದೆ. ಈ ಪ್ರಯುಕ್ತ ನಿರ್ದೇಶಕರು, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ, ಕರ್ನಾಟಕ ರಾಜ್ಯ, ಬೆಂಗಳೂರು ರವರು ಸಹಕಾರ ಸಂಘಗಳ ಕಾಯ್ದೆ 63(2) ರಂತೆ ಮತ್ತು ಸೌಹಾರ್ದ ಸಹಕಾರ ಸಂಘಗಳ ಕಾಯ್ದೆ 33(2) ರಂತೆ ವಂಟನೆ ಆದೇಶ ನೀಡಿರುತ್ತಾರೆ.

ಈ ಪ್ರಯುಕ್ತ ನಿಯುಕ್ತಿಗೊಂಡ ಲೆಕ್ಕಪರಿಶೋಧಕರಿಗೆ ಸಹಕಾರ ನೀಡಿ ಲೆಕ್ಕಪರಿಶೋಧನೆ ಪೂರೈಸಲು ವಿನಂತಿಸಲಾಗಿದೆ. ಲೆಕ್ಕಪರಿಶೋಧನೆ ಬಾಕಿ ಉಳಿದಲ್ಲಿ ಸಹಕಾರ ಕಾಯ್ದೆ ಅನ್ವಯ ಅಗತ್ಯ ಕ್ರಮವಿಟ್ಟು ನೊಂದಣಿ ರದ್ದತಿಗೆ ಕ್ರಮಕೈಗೊಳ್ಳಲಾಗುವುದು ಎಂದು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## NHM ಯೋಜನೆಯಡಿ ಗೋಡಂಬಿ ಸಂಸ್ಕರಣಾ ಘಟಕಕ್ಕೆ ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿನ ಬೆಳಗಾವಿ ತಾಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ರಾಷ್ಟ್ರೀಯ ತೋಟಗಾರಿಕೆ ಮಿಷನ್(NHM) ಯೋಜನೆಯಡಿ ಪ್ರಾಥಮಿಕ ಸಂಸ್ಕರಣಾ ಘಟಕಕ್ಕೆ (ಗೋಡಂಬಿ ಸಂಸ್ಕರಣಾ ಘಟಕ) ಶೇ.40 ರಷ್ಟು ಸಹಾಯಧನ ಪಡೆಯಲು ಅವಕಾಶವಿರುತ್ತದೆ.

ಆಸಕ್ತ ರೈತ ಫಲಾನುಭವಿಯ ಹೆಸರಿನಲ್ಲಿ ನಿವೇಶನ/ ಜಮೀನು ಹೊಂದಿದ್ದು, ಸದರಿ ಕಾರ್ಯಕ್ರಮವು "Credit linked Back ended subsidy ಆಗಿರುವುದರಿಂದ ರಾಷ್ಟ್ರೀಕೃತ ಬ್ಯಾಂಕಿನಿಂದ ದಿರ್ಘಾವಧಿ ಸಾಲ ಪಡೆಯುವುದು ಕಡ್ಡಾಯವಾಗಿರುತ್ತದೆ.

ಆದ್ದರಿಂದ ಅರ್ಹ ರೈತರು ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಅಥವಾ ತಾಲೂಕೂ ತೋಟಗಾರಿಕೆ ಕಛೇರಿಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಬೆಳಗಾವಿ ಇವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ನೇಕಾರ ಸಮ್ಮಾನ ಯೋಜನೆಯಡಿ ನೇಕಾರರು ಹಾಗೂ ಕಾರ್ಮಿಕರಿಗೆ ಆರ್ಥಿಕ ನೆರವು

ಬೆಳಗಾವಿ : ವಿದ್ಯುತ್ ಮಗ್ಗ ವಿದ್ಯುತ್ ಮಗ್ಗ ಹಾಗೂ ಮಗ್ಗಪೂರ್ವ ಘಟಕಗಳ ನೇಕಾರರು ಹಾಗೂ ಕಾರ್ಮಿಕರಿಗೆ ತಲಾ ರೂ.5,000/– ಗಳ ವಾರ್ಷಿಕ ಆರ್ಥಿಕ ನೆರವು ನೀಡುವ ನೇಕಾರ ಸಮ್ಮಾನ(ವಿದ್ಯುತ್ ಮಗ್ಗ) ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ.

ಸದರಿ ಯೋಜನೆಯಡಿ ನೆರವು ಪಡೆಯಲು ನೇಕಾರರ ಘಟಕಗಳು ವಿದ್ಯುತ್ ಮಗ್ಗ ಗಣತಿಯಲ್ಲಿ ನೋಂದಾಯಿಸಿಕೊಂಡಿರಬೇಕು. ಸದರಿ ಗಣತಿಯನ್ನು ಎ.ಐ.ಎಮ್.ಎಸ್ ಸಂಸ್ಥೆಯಿಂದ ಕೈಗೊಳ್ಳಲಾಗುತ್ತಿದ್ದು, ಗಣತಿಯಲ್ಲಿ ನೋಂದಾಯಿಸಲು ಬಿಟ್ಟು ಹೋದ ಘಟಕದವರು ಯಾವುದೇ ಮದ್ಯವರ್ತಿಗಳ ಆಸೆ–ಆಮಿಷಕ್ಕೆ ಒಳಗಾಗದೇ, ನೇರವಾಗಿ ಈ ಕಛೇರಿಯನ್ನು ಸಂಪರ್ಕಿಸಲು ತಿಳಿಸಲಾಗಿದೆ.

ನೇಕಾರ ಸಮ್ಮಾನ ಯೋಜನೆಯಡಿ ಆರ್ಥಿಕ ನೆರವನ್ನು ಪಡೆಯಲು ಯಾವುದೇ ಅರ್ಜಿ ಅಥವಾ ಆನ್‌ಲೈನ್ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ ಹಾಗೂ ಯಾವುದೇ ಶುಲ್ಕ ಇರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಈ ಕಛೇರಿ ದೂರವಾಣಿ ಸಂಖ್ಯೆ: 0831–2950674 ಗೆ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ಜಿಲ್ಲಾ ಪಂಚಾಯತ್ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜವಾಹರ ನವೋದಯ ವಿದ್ಯಾಲಯ 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಕೆ ದಿನಾಂಕ ವಿಸ್ತರಣೆ

ಬೆಳಗಾವಿ: 2023–2024 ನೇ ಜವಾಹರ ನವೋದಯ ವಿದ್ಯಾಲಯಕ್ಕೆ 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಅಹ್ವಾನಿಸಲಾಗಿದ್ದು, ಫೆ, 08/2023ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಫೆ,08/2023 ರವರೆಗೆ ವಿಸ್ತರಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಆನ್ ಲೈನ್ ನೋಂದಣಿಗಾಗಿ https://.navodaya.gov.in ವೆಬ್‌ಸೈಟ್‌ಗೆ ಸಂಪರ್ಕಿಸಿ ಯಾವುದೇ ಶುಲ್ಕವನ್ನು ಪಾವತಿಸದೆ ಅರ್ಜಿಗಳನ್ನು ಸಲ್ಲಿಸಬಹುದು ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ ಶುಲ್ಕ ವಿನಾಯಿತಿ, ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯ

ಬೆಳಗಾವಿ: ನಗರದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2022–23ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", "ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಜನವರಿ 31/2023ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಫೆ,28/2023 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ https://ssp.post-matric.karnataka.gov.in ಕಾರ್ಯಕ್ರಮಗಳ ವಿವರ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಅದೇಶಗಳ ಬಗ್ಗೆ ಮಾಹಿತಿಗಾಗಿ ನೀಡಬೇಕಾದ ವೆಬ್ ಸೈಟ್ https://bcwd.karnataka.gov.in , ಇಲಾಖಾ ಸಹಾಯವಾಣಿ ಸಂಖ್ಯೆ : 8050770005. ಹಾಗೂ ಇಲಾಖಾ ಇಮೇಲ್ bcwdhelpline@gmail.com ಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಸಂಖ್ಯೆ: 080–35254757 ಇಮೇಲ್: postmet-richelp@karnataka.gov.in ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳಾದ ಲಕ್ಷ್ಮಣ ಬಬಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳಗಾವಿ ಅಭಿವೃದ್ಧಿಗೆ ಎಫ್‌ಒಎಬಿ ಕಾರ್ಯ ಪ್ರಶಂಸನೀಯ: ಲೋಗೋ ಲೋಕಾರ್ಪಣೆಗೊಳಿಸಿದ ರವಿಶಂಕರ ಗುರೂಜಿ

ಬೆಳಗಾವಿ: ವಿವಿಧ ಕ್ಷೇತ್ರಗಳಲ್ಲಿ ಕೆಲಸ ಮಾಡುತ್ತಿರುವ ಸಂಘಟನೆಗಳೆಲ್ಲ ಬೆಳಗಾವಿಯ ಅಭಿವೃದ್ಧಿಗಾಗಿ ಒಗ್ಗೂಡಿರುವುದು ಅತ್ಯಂತ ಒಳ್ಳೆಯ ಬೆಳವಣಿಗೆ ಎಂದು ಆರ್ಟ್ ಆಫ್ ಲಿವಿಂಗ್ ನ ಶ್ರೀ ಶ್ರೀ ರವಿಶಂಕರ ಗುರೂಜಿ ಪ್ರಶಂಸಿಸಿದ್ದಾರೆ.

ಮಂಗಳವಾರ ಇಲ್ಲಿಯ ಕೆಎಲ್‌ಇ ಸಂಸ್ಥೆಯ ಶತಮಾನೋತ್ಸವ ಸಭಾಭವನದಲ್ಲಿ ಫೆಡರೇಶನ್ ಆಫ್ ಅಸೋಸಿಯೇಶನ್ಸ್ ಆಫ್ ಬೆಳಗಾವಿ (ಎಫ್‌ಒಎಬಿ) ಲೋಗೋ ಲೋಕಾರ್ಪಣೆಗೊಳಿಸಿ ಅವರು ಆಶೀರ್ವಚನ ನೀಡುತ್ತಿದ್ದರು. ಬೆಳಗಾವಿ ಎಂದರೆ ಒಂದು ಮೂಲೆಯಲ್ಲಿರುವ ಪ್ರದೇಶ, ಬೇಡದ ಕಾರಣಕ್ಕೆ ಸುದ್ದಿಯಲ್ಲಿರುವ ಪ್ರದೇಶ ಎನ್ನುವ ಭಾವನೆ ಹೊರಗಡೆ ಇದೆ. ಆದರೆ ನಿಜ ಸ್ಥಿತಿ ಆ ರೀತಿಯ ಇಲ್ಲ. ಇಲ್ಲಿ ಉದ್ಯಮ ಸ್ನೇಹಿ ವಾತಾವರಣವಿದೆ. ಇಲ್ಲಿನ ಉದ್ಯಮಿಗಳು ಹಾಗೂ ಬೇರೆ ಬೇರೆ ಕ್ಷೇತ್ರಗಳಲ್ಲಿ ಕೆಲಸ ನಿರ್ವಹಿಸುತ್ತಿರುವವರೆಲ್ಲ ಸೇರಿ ಇಂತಹ ಒಂದು ಸಂಘಟನೆ ಕಟ್ಟಿಕೊಂಡು ಉತ್ತಮ ಕೆಲಸ ಮಾಡುತ್ತಿದ್ದಾರೆ. ಸಮಾಜದ ಉನ್ನತಿಗೆ ಇಂತಹ ಪ್ರಯತ್ನ ಶ್ಲಾಘನೀಯ ಎಂದು ಅವರು ಹೇಳಿದರು.

ಬೆಳಗಾವಿಯ ಇತಿಹಾಸ, ಬೆಳಗಾವಿಯ ಅಂತರ್ ಶಕ್ತಿಗಳನ್ನೆಲ್ಲ ತಿಳಿದು ನಿಜವಾಗಿ ಸಂತೋಷವಾಗಿದೆ. ಇಷ್ಟೊಂದು ಉದ್ಯಮಿಗಳು ಇಲ್ಲಿಯ ನೆಲದಲ್ಲಿ ತಯಾರಾಗಿದ್ದಾರೆ ಎನ್ನುವುದೇ ಖುಷಿ ನೀಡುವ ಸಂಗತಿ. ಎಫ್‌ಒಎಬಿ ಬೆಳಗಾವಿಯನ್ನು ಔನ್ನತ್ಯಕ್ಕೇರಿಸಲು ಮಾಡುತ್ತಿರುವ ಕೆಲಸ ಮೆಚ್ಚುವಂತದ್ದು ಎಂದು ರವಿಶಂಕರ ಗುರೂಜಿ ಹೇಳಿದರು.

ರಾಜಕಾರಣಿಗಳು ತಮ್ಮ ಅವಧಿ ಪೂರ್ತಿ ಆರೋಪ ಪ್ರತ್ಯಾರೋಪ, ಜಗಳ ಮಾಡುವುದನ್ನು ನಿಲ್ಲಿಸಬೇಕು. ಇದರಿಂದ ಸಮಾಜದಲ್ಲಿ ಕಲುಷಿತ ವಾತಾವರಣ ನಿರ್ಮಾಣವಾಗುತ್ತಿದೆ. ಕೊನೆಯ 6 ತಿಂಗಳು ರಾಜಕೀಯ ಮಾಡಲಿ. ಆದರೆ ಉಳಿದ ಅವಧಿಯನ್ನು ಅಭಿವೃದ್ಧಿಗೆ ಮೀಸಲಿಡಬೇಕು ಎಂದು ಅವರು ಕರೆ ನೀಡಿದರು.

ಬೆಳಗಾವಿ ಸೇರಿದಂತೆ ಎಲ್ಲೆಡೆ ಜನರಲ್ಲಿ ಖಿನ್ನತೆ ಹೆಚ್ಚಾಗುತ್ತಿದೆ. ಮಾದಕ ವಸ್ತುಗಳ ಸೇವನೆ ಅತಿಯಾಗುತ್ತಿದೆ. ಕೋವಿಡ್ ನಂತರದ ದಿನಗಳಲ್ಲಿ ಪ್ರತಿ 40 ಸೆಕೆಂಡ್ ಗೆ ಒಬ್ಬರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಇದಕ್ಕೆಲ್ಲ ಕಡಿವಾಣ ಹಾಕಬೇಕಿದೆ. ವಿದ್ಯಾರ್ಥಿಗಳಲ್ಲಿ ಊಹಿಸಲು ಅಸಾಧ್ಯವಾದ ಮಟ್ಟಿಗೆ ಖಿನ್ನತೆ ಕಾಡುತ್ತಿದೆ. ಇದಕ್ಕೆಲ್ಲ ಕಡಿವಾಣ ಹಾಕುವ ಕೆಲಸ ಆಗಬೇಕಿದೆ. ಮಕ್ಕಳನ್ನು ಒಂದೆಡೆ ಸೇರಿಸುವ ಕೆಲಸ ಮಾಡುವುದಾದರೆ 6 ದಿನಗಳ ಶಿಬಿರ ಸಂಘಟಿಸುವ ಜವಾಬ್ದಾರಿಯನ್ನು ಆರ್ಟ್ ಆಫ್ ಲಿವಿಂಗ್ ತೆಗೆದುಕೊಳ್ಳುತ್ತದೆ ಎಂದು ರವಿಶಂಕರ ಗುರೂಜಿ ತಿಳಿಸಿದರು.



ಮೆಡಿಟೇಶನ್ ಸಮಾಜದ ಇಂದಿನ ಸಮಸ್ಯೆಗಳಿಗೆ ಪರಿಹಾರ ನೀಡುತ್ತದೆ. ದುರದೃಷ್ಟವೆಂದರೆ ಇದಕ್ಕೆ ಜಾತಿ ಬಣ್ಣ ನೀಡಲಾಗುತ್ತಿದೆ. ಇದು ನಿಜವಾಗಿ ಜೀವನದ ಒಂದು ಭಾಗವಾಗಬೇಕಿದೆ. ಒತ್ತಡ, ಉದ್ವೇಗ ನಿವಾರಣೆಯಾದರೆ ಮನುಷ್ಯ ನೆಮ್ಮದಿ ಕಾಣುತ್ತಾನೆ. ಮೆಡಿಟೇಶನ್ ಮತ್ತು ಆಯುರ್ವೇದಗಳ ಕುರಿತು ಇರುವ ಪೂರ್ವಾಗ್ರಹ ಪೀಡಿತ ಭಾವನೆ ಹೊಗಲಾಡಿಸಬೇಕಿದೆ.

ಚೀನಾ ದೇಶವು ಅಮೆರಿಕದ ನೆರವಿನಿಂದ ಕೃತಕವಾಗಿ ವೈರಸ್ ಸಿದ್ಧಪಡಿಸಿ ಬಿಟ್ಟಿತು. ಅದು ಜಗತ್ತನ್ನೇ ಹಾಳುಮಾಡುವ ಕೃತ್ಯ. ಜನಸಂಖ್ಯೆ ನಿಯಂತ್ರಣಕ್ಕೆ ಇಂಥ ಕೃತ್ಯ ಮಾಡಬಾರದು.

ಆದರೆ ಭಾರತೀಯರಾದ ನಾವು ಮಾತ್ರ ಆಂಟಿವೈರಸ್ ಲಸಿಕೆ ಕಂಡುಹಿಡಿದು ಜಗತ್ತಿಗೆ ನಮ್ಮ ಸಾಮರ್ಥ್ಯ ತೋರಿದೆವು. ವ್ಯಾಕ್ಸಿನೇಶನ್ ನಿಂದ ಕೇವಲ ಶೇ.60ರಷ್ಟು ಪರಿಹಾರವಿರುವಾಗ ನಮ್ಮಲ್ಲಿ 18 ಗಿಡಮೂಲಿಕೆಗಳಿಂದ ತಯಾರಿಸಲಾಗಿರುವ ಔಷಧ ನೂರಕ್ಕೆ ನೂರರಷ್ಟು ಕೋವಿಡ್ ಗೆ ಪರಿಹಾರ ನೀಡುತ್ತದೆ ಎನ್ನುವುದು ಸಾಬೀತಾಗಿದೆ ಎಂದು ವಿವರಿಸಿದರು.

ಇದಕ್ಕೂ ಮೊದಲು ಮಾತನಾಡಿದ ಬೆಳಗಾವಿ ಪೊಲೀಸ್ ಆಯುಕ್ತ ಡಾ. ಬೋರಲಿಂಗಯ್ಯ, ಬೆಳಗಾವಿ ಅಭಿವೃದ್ಧಿಗೆ ಹಿನ್ನಡೆಯಾಗಿರುವ ಸಮಸ್ಯೆಗಳನ್ನು ಗುರುತಿಸುವ ಮತ್ತು ಎಫ್‌ಒಎಬಿ ಕೋರ್ ಕಮಿಟಿ ಆಗಾಗ ಸಭೆ ಸೇರಿ ಪರಿಹಾರ ಕಂಡುಕೊಳ್ಳುವ ಕೆಲಸ ಮಾಡಬೇಕು ಎಂದರು.

ಪೊಲೀಸ್ ವರಿಷ್ಠಾಧಿಕಾರಿ ಡಾ.ಸಂಜೀವ ಪಾಟೀಲ, ಬೆಳಗಾವಿ ಅಭಿವೃದ್ಧಿಗೆ ಎಲ್ಲ ರೀತಿಯ ಸಹಕಾರ ನೀಡಲಾಗುವುದು. ತುರ್ತಾಗಿ ಪರಿಹಾರ ಕಂಡುಕೊಳ್ಳಬೇಕಾದ ವಿಷಯಗಳ ಪಟ್ಟಿ ಮಾಡಿ ಚರ್ಚಿಸುವ ಕೆಲಸವಾಗಬೇಕು ಎಂದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಕುಲಪತಿ ಡಾ.ವಿದ್ಯಾಶಂಕರ, ಬೆಳಗಾವಿ ಮೊದಲಿಗಿಂತ ಈಗ ಸಾಕಷ್ಟು ಬದಲಾಗಿದೆ. ಜನರಲ್ಲಿ ತಿಳಿವಳಿಕೆ ಮೂಡಿಸುವ ಮೂಲಕ ಇನ್ನಷ್ಟು ಬದಲಾವಣೆ ಸಾಧ್ಯವಿದೆ. ಮುಂದಿನ ದಿನಗಳಲ್ಲಿ ನಗರಕ್ಕೆ ಉತ್ತಮ ಭವಿಷ್ಯವಿದೆ. ಇಲ್ಲಿನ ಉದ್ಯಮಿಗಳ ಜೊತೆ ಚರ್ಚಿಸಿ, ಒಂದು ಬಂಡವಾಳ ಹೂಡಿಕೆದಾರರ ಸಮಾವೇಶ ಆಯೋಜಿಸಲಾಗುವುದು ಎಂದರು.

ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯ ಕುಲಪತಿ ನಿತಿನ್ ಗಂಗನೆ, ಬೆಳಗಾವಿ ಅತ್ಯಂತ ಸುಂದರ ನಗರವಾಗಿದ್ದು, ಎಲ್ಲರೂ ಕೈಜೋಡಿಸಿ ಅಭಿವೃದ್ಧಿಗೆ ಕೆಲಸ ಮಾಡೋಣ ಎಂದರು.

ಕಮಾಂಡಂಟ್ ಎಮ್‌ಎಲ್‌ಐಆರ್ ಸಿ ಬ್ರಿಗೇಡಿಯರ್ ಜಾಯ್ ದೀಪ ಮುಖರ್ಜಿ, ಮಿಲ್ಟ್ರಿ ಕಮಾಂಡರ್ ಜೆಎಲ್ ವಿಂಗ್ ಮೇಜರ್ ವಿ ಕೆ ಗುರಂಗ್, ಏರ್ ಫೋರ್ಸ್ ಡೈರಕ್ಟರ್ ರಾಜೇಶ ಕುಮಾರ ಮೌರ್ಯ ಮೊದಲಾದವರು ಮಾತನಾಡಿದರು.

ಎಫ್‌ಒಎಬಿ ಕೋ ಆರ್ಡಿನೇಟರ್ ಚೈತನ್ಯ ಕುಲಕರ್ಣಿ ಸ್ವಾಗತಿಸಿದರು. ಡಾ.ರಾಜೇಂದ್ರ ಬೆಳಗಾಂವ್ಕರ್ ಬೆಳಗಾವಿಯ ಸಮಗ್ರ ಪರಿಚಯ ನೀಡಿದರು. ಚೆಂಬರ್ ಆಫ್ ಕಾಮರ್ಸ್ ಚೇರಮನ್ ಹೇಮೇಂದ್ರ ಪೋರವಾಲ್ ರವಿಶಂಕರ ಗುರೂಜಿ ಅವರನ್ನು ಸನ್ಮಾನಿಸಿದರು. ಎಫ್‌ಒಎಬಿ ಸದಸ್ಯರಾಗಿರುವ 50ಕ್ಕೂ ಹೆಚ್ಚು ವಿವಿಧ ಸಂಘಟನೆಗಳ ಅಧ್ಯಕ್ಷ, ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

## ಪತಿಯಿಂದಲೇ ಪತ್ನಿಯ ಹತ್ಯೆ



ಗದಗ: ವ್ಯಕ್ತಿಯೊಬ್ಬ ತನ್ನ ಪತ್ನಿಯನ್ನು ಕೊಡಲಿಯಿಂದ ಬರ್ಬರವಾಗಿ ಕೊಲೆಗೈದ ಘಟನೆ ಜಿಲ್ಲೆಯ ಗಜೇಂದ್ರಗಡ ತಾಲೂಕಿನ ಬೇವಿನಕಟ್ಟಿ ಗ್ರಾಮದಲ್ಲಿ ಮಂಗಳವಾರ ಬೆಳಿಗ್ಗೆ ನಡೆದಿದೆ.

ವಿದ್ಯಾ ಮೌನೇಶ ಆಡಿನ (24 ವ) ಕೊಲೆಯಾಗಿರುವ ದುರ್ದೈವಿ. ಮೌನೇಶ ಆಡಿನ ತನ್ನ ಹೆಂಡತಿಯನ್ನು ಕೊಡಲಿಗಿಂದ ಕೊಚ್ಚಿ ಕೊಲೆ ಮಾಡಿದ ಆರೋಪಿ.

ಕೊಲೆಗೆ ನಿಖರವಾದ ಮಾಹಿತಿ ಲಭ್ಯವಾಗಿಲ್ಲ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಗಜೇಂದ್ರಗಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗಾಂಜಾ ಮಾರುತ್ತಿದ್ದ ಆರೋಪಿ ಬಂಧನ



ಅಥಣಿ: ಇಲ್ಲಿನ ಎಪಿಎಂಸಿಯಲ್ಲಿ ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

ವಸಂತ ರಾಮಪ್ಪ ಹುಲ್ಯಾಳ (38) ಬಂಧಿತ ಆರೋಪಿ. ಈತನಿಂದ 29000 ರೂ. ಮೌಲ್ಯದ 1.450 ಗ್ರಾಂ ಗಾಂಜಾ ಹಾಗೂ 450 ರೂ. ನಗದು ವಶಪಡಿಸಿಕೊಳ್ಳಲಾಗಿದೆ.

ಎಸ್ಪಿ, ಡಿವೈಎಸ್ಪಿ, ಸಿಪಿಐ ಅವರ ಮಾರ್ಗದರ್ಶನದಲ್ಲಿ ಪಿಎಸ್‌ಐ ಹಾಗೂ ಸಿಬ್ಬಂದಿಗಳಾದ ಎಎಸ್ ಐ ಆರೇರ್, ರಮೇಶ ಹಾದಿಮನಿ, ಶ್ರೀಧರ್ ಬಾಂಗಿ, ಭೀಮಶಿ ಮನ್ನಾಪುರ ಅವರನ್ನೊಳಗೊಂಡ ತಂಡ ಈ ಕಾರ್ಯಾಚರಣೆ ನಡೆಸಿದೆ.

ಅಥಣಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರಿದಿದೆ.

## ಗಾಂಜಾ ಬೆಳೆದ ಅರೋಪಿಗೆ 15 ವರ್ಷ ಕಠಿಣ ಶಿಕ್ಷೆ

ಗದಗ: ತನ್ನ ಸ್ವಂತ ಜಮೀನಿನಲ್ಲಿ ಗಾಂಜಾ ಬೆಳೆದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಜಿಲ್ಲೆಯ ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಉಡಚಪ್ಪ ಬಸವಣ್ಣೆಪ್ಪ ಪುರದ ಎಂಬ ವ್ಯಕ್ತಿಗೆ ಗದಗ ಜಿಲ್ಲಾ ಸತ್ರ ನ್ಯಾಯಾಲಯ 15 ವರ್ಷ ಕಠಿಣ ಶಿಕ್ಷೆ ಜೊತೆಗೆ 2 ಲಕ್ಷ ರೂ. ದಂಡ ವಿಧಿಸಿ ಆದೇಶ ನೀಡಿದೆ.

ನ. 9, 2013ರಂದು ಅಂದಿನ ಪ್ರೊಬೆಷನರಿ ಡಿವೈಎಸ್ಪಿ ಆಗಿದ್ದ ಬಿ.ಎಸ್. ನೇಮಗೌಡ (ಇಂದಿನ ಎಸ್ಪಿ) ನೇತೃತ್ವದಲ್ಲಿ ಉಡಚಪ್ಪನ




ಹೊಲದಲ್ಲಿ ದಾಳಿ ಮಾಡಿ ಅಂದಾಜು 101 ಕೆಜಿ ಗಾಂಜಾ ಸ್ವತ್ತು ವಶಪಡಿಸಿಕೊಳ್ಳಲಾಗಿತ್ತು. ಹತ್ತಿ ಮತ್ತು ತೊಗರಿ ಬೆಳೆಯ ನಡುವೆ ಉಡಚಪ್ಪ ಗಾಂಜಾ ಬೆಳೆದಿದ್ದನು.

ಅಂದಾಜು 1 ಲಕ್ಷ ರೂ. ಮೌಲ್ಯದ ಗಾಂಜಾ ಇದಾಗಿತ್ತು. ಎನ್ಡಿಪಿಎಸ್ ಪ್ರಕರಣ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ಪಿಎಸ್‌ಐ ಆರ್.ಎಸ್. ಕಟ್ಟಿಮನಿ ತನಿಖೆ ನಡೆಸಿ ಏಪ್ರಿಲ್ 30, 2014ರಂದು ನ್ಯಾಯಾಲಯಕ್ಕೆ ದೋಷಾರೋಪಣ ಪತ್ರ ಸಲ್ಲಿಸಿದ್ದರು.

ಆರೋಪ ಸಾಭಿತಾದ ಹಿನ್ನೆಲೆಯಲ್ಲಿ ಜಿಲ್ಲಾ ಸತ್ರ ನ್ಯಾಯಾಲಯ ಕಠಿಣ ಶಿಕ್ಷೆ ವಿಧಿಸಿದೆ.

## ಶ್ರೀ ಮಾರಿಕಾಂಬಾ ದೇವಿ ಜಾತ್ರೆಗೆ ಅದ್ದೂರಿ ಚಾಲನೆ



ಸಾಗರ : ಇತಿಹಾಸ ಪ್ರಸಿದ್ಧ ಶ್ರೀ ಮಾರಿಕಾಂಬಾ ಜಾತ್ರೆ ಮಂಗಳವಾರ ಅದ್ದೂರಿಯಾಗಿ ಪ್ರಾರಂಭಗೊಂಡಿತು.

ಒಂಬತ್ತು ದಿನಗಳ ಕಾಲ ನಡೆಯುವ ಶ್ರೀ ಮಾರಿಕಾಂಬಾ ಜಾತ್ರೆಯ ಮೊದಲ ದಿನ ಅನೂಚಾನವಾಗಿ ನಡೆದುಕೊಂಡು ಬಂದಿರುವ ಧಾರ್ಮಿಕ ವಿಧಿವಿಧಾನಗಳಿಗೆ ಬೆಳಿಗ್ಗೆ 5ರ ಬ್ರಾಹ್ಮೀ ಮಹೂರ್ತದಲ್ಲಿ ಚಾಲನೆ ನೀಡಲಾಯಿತು.

ಮಂಗಳವಾರ ಬೆಳಗಿನ ಜಾವ 3 ಗಂಟೆಗೆ ಸಾಗರದ ಇತಿಹಾಸ ಪ್ರಸಿದ್ಧ ಶ್ರೀ ಮಹಾಗಣಪತಿ ದೇವಾಲಯದಲ್ಲಿ ಶ್ರೀ ಮಾರಿಕಾಂಬಾ ದೇವಿಯ ತಾಳಿ ಮತ್ತು ಆಭರಣಗಳಿಗೆ ಪೂಜೆ ಸಲ್ಲಿಸಲಾಯಿತು. ಧಾರ್ಮಿಕ ವಿಧಿವಿಧಾನಗಳನ್ನು ದೇವಾಲಯದ ಪ್ರಧಾನ ಅರ್ಚಕ ವಿದ್ವಾನ್ ಪಿ.ಎಲ್.ಗಜಾನನ ಭಟ್ ನೆರವೇರಿಸಿದರು.

ಶ್ರೀ ಮಾರಿಕಾಂಬಾ ಜಾತ್ರಾ ಸಮಿತಿಯ ಪದಾಧಿಕಾರಿಗಳ ಪಾಲ್ಗೊಂಡಿದ್ದರು. ನಂತರ ಸಂಪ್ರದಾಯದಂತೆ ಪುರೋಹಿತ ರಮೇಶ ಭಟ್ಟರ ಮನೆಯಲ್ಲಿ ಪೂಜಾ ಕಾರ್ಯಕ್ರಮ ಸಾಂಗವಾಗಿ ನೆರವೇರಿತು.

ಶ್ರೀ ಮಹಾಗಣಪತಿ ದೇವಾಲಯದಿಂದ ಮಂಗಳವಾದ್ಯಗಳೊಂದಿಗೆ ಸಾಗರ ನಗರದ ಪ್ರಮುಖ ರಸ್ತೆಗಳಲ್ಲಿ ಅಮ್ಮನವರ ಆಭರಣದ ಮೆರವಣಿಗೆ ಸಾಗಿ ತವರು ಮನೆ ದೇವಸ್ಥಾನಕ್ಕೆ ಆಭರಣಗಳನ್ನು ತರಲಾಯಿತು. ಸಾಗರ ನಗರದ ತವರು ಮನೆಯಲ್ಲಿ ಪ್ರತಿಷ್ಠಾಪಿಸಿದ್ದ 18 ಅಡಿ ಎತ್ತರದ ಶ್ರೀ ಮಾರಿಕಾಂಬಾ ವಿಗ್ರಹಕ್ಕೆ ವಿವಿಧ ಸಾಂಪ್ರಾದಾಯಿಕ ಆಚರಣೆಗಳನ್ನು ನಡೆಸಿ ಆಭರಣಗಳನ್ನು ತೊಡಿಸಲಾಯಿತು.

ಪೂಜಾ ಕಾರ್ಯಕ್ರಮದ ನಂತರ ದೇವಿಯ ವಿಗ್ರಹಕ್ಕೆ ಭಾರಿ ಗಾತ್ರದ ಹಾರ ಸೇರಿದಂತೆ ವೈವಿಧ್ಯಮಯ ಹೂವಿನ ಅಲಂಕಾರ ನಡೆಸಿ ಮಹಾಮಂಗಳಾರತಿ ನಡೆಸಲಾಯಿತು. ನಂತರ ಸರತಿ ಸಾಲಿನಲ್ಲಿ ನಿಂತಿದ್ದ ಭಕ್ತರದರ್ಶನಕ್ಕೆ ಅವಕಾಶ ಕಲ್ಪಿಸಲಾಯಿತು.

ತವರು ಮನೆಯಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಪ್ರಧಾನ ಅರ್ಚಕ ಮಧುಕರ್ ಭಟ್, ಪುರೋಹಿತ ರಮೇಶ್ ಭಟ್, ಗಜಾನನ ಜೋಯ್ಸ್, ನೀಲಕಂಠ ಜೋಯ್ಸ್, ಸದಾಶಿವ ಜೋಯ್ಸ್, ರಾಘವೇಂದ್ರ ಭಟ್, ನವೀನ್ ಜೋಯ್ಸ್, ಸುಧೀಂದ್ರ ಜೋಯ್ಸ್, ಲಕ್ಷ್ಮಣ್‌ಜೋಯ್ಸ್ ಇನ್ನಿತರರು ಸಾರಥ್ಯ ವಹಿಸಿದ್ದರು.

## ನನ್ನ ಬಗ್ಗೆ ಹೇಳಿಕೆ ಕೊಡುವಾಗ ಎಚ್ಚರಿಕೆ ಇರಲಿ: ಎಚ್‌ಡಿಕೆ ವಾರ್ನಿಂಗ್

ಬೆಂಗಳೂರು: ಜೆಡಿಎಸ್ ಟ್ವೀಟ್ ಬಗ್ಗೆ ಪ್ರತಿಕ್ರಿಯಿಸಿದ್ದ ಬಿಜೆಪಿ ರಾಷ್ಟ್ರೀಯ ಪ್ರಧಾನಕಾರ್ಯದರ್ಶಿ ಸಿ.ಟಿ.ರವಿ, ನಮ್ಮದು ಮನೆಯೊಳಗಿನ ಸಾಮರ್ಥ್ಯ, ಹೆಚ್ ಡಿಕೆಯವರದ್ದು ಮನೆ ಊರು ದಾಟಿದ ಸಾಮರ್ಥ್ಯ ಎಂದು ವ್ಯಂಗ್ಯವಾಡಿದ್ದರು. ಸಿ.ಟಿ ರವಿ ಹೇಳಿಕೆಗೆ ತಿರುಗೇಟು ನೀಡಿರುವ ಮಾಜಿ ಸಿಎಂ ಕುಮಾರಸ್ವಾಮಿ, ಶಿಕ್ಷಕನೋರ್ವನ ಸಾವಿನ ಬಗ್ಗೆ ಪ್ರಸ್ತಾಪಿಸುವ ಮೂಲಕ ಟಾಂಗ್ ನೀಡಿದ್ದಾರೆ.

ಸುದ್ದಿಗೋಷ್ಠಿಯಲಿ ಮಾತನಾಡಿದ ಹೆಚ್.ಡಿ.ಕುಮಾರಸ್ವಾಮಿ, ನಾನು ಸಿ.ಟಿ.ರವಿ ವಿಚಾರಕ್ಕೆ ಹೋಗಿಲ್ಲ, ಹೀಗಿರುವಾಗ ಅವರೇಕೆ ನನ್ನ ಬಗ್ಗೆ ಟೀಕಿಸ್ತಿದ್ದಾರೆ? ನಾವು ಮನೆ ಬಿಟ್ಟು ಊರಾಚೆ ನಡೆಸಿದವರು ಎಂದು ಹೇಳಿದ್ದಾರೆ. ಸಿ.ಟಿ ರವಿಯ ಇತಿಹಾಸ ಏನೆಂಬುದು ಇಡೀ ರಾಜ್ಯಕ್ಕೆ ಗೊತ್ತು. ಸಿ.ಟಿ ರವಿಯೇನು ಪತಿವ್ರತಾನಾ? ಎಂದು ಪ್ರಶ್ನಿಸಿದ್ದಾರೆ.

ಶಿಕ್ಷಕನೋರ್ವ ಕೆ ಆರ್ ಎಸ್ ನಿಂದ ಬಿದ್ದು ಯಾಕೆ ಸತ್ತ? ಶಿಕ್ಷಕನ ಸಾವಿನ ಬಗೆ ಹೇಳ್ತೀರಾ? ನನ್ನ ಬಗ್ಗೆ ಹೇಳಿಕೆ ಕೊಡುವಾಗ ಎಚ್ಚರವಿರಲಿ



ಎಂದು ಹೇಳಿದ್ದಾರೆ.

ಬಿಜೆಪಿ ವಿರುದ್ಧ ಸರಣಿ ಟ್ವೀಟ್ ಮೂಲಕ ಕಿಡಿಕಾರಿದ್ದ ಜಾತ್ಯಾತೀತ ಜನತಾದಳ, ಪ್ರಧಾನಿ ಮೋದಿಯವರು ಬಂದ ದಿನ ರೆಕ್ಕೆ ಬಲಿತ ಹಕ್ಕಿಯಂತೆ ಆಡುವುದು ಮಾತ್ರ ಇಲ್ಲಿನ ಬಿಜೆಪಿ ಸರ್ಕಾರಕ್ಕೆ ಗೊತ್ತಿರುವುದು! ಇಂತಹ ಬೃಹತ್ ನಾಟಕ ಮಂಡಳಿಯ ಯಾವ ಪ್ರದರ್ಶನವೂ ಇನ್ನು ಕರ್ನಾಟಕದಲ್ಲಿ ನಡೆಯುವುದಿಲ್ಲ. ನಿಮ್ಮಂತಹ ಮುಖೇಡಿ ರಾಜಕಾರಣಿಗಳು ಹಾಗೂ ನಿಮ್ಮನ್ನು ತೊಗಲು ಗೊಂಬೆಗಳನ್ನಾಗಿ ಮಾಡಿರುವ ದೆಹಲಿ ದೊರೆಗಳನ್ನು ರಾಜ್ಯ ತಿರಸ್ಕರಿಸಲಿದೆ. ರಾಜ್ಯ ಸರ್ಕಾರ ನಪುಂಸಕವಾಗಿರುವುದು ದಿಟ.

ಬರಡು ಭೂಮಿಯಂತೆ ಯಾವ ಪ್ರಯೋಜನವು ಇಲ್ಲದ ರಾಜ್ಯ ಸರ್ಕಾರವಿದು. ಸಾರ್ವಜನಿಕರ ಹಣ ಬಾಚುವ, ದೋಚುವುದಷ್ಟೆ ಇವರ ಕಾಯಕ. ಒಟ್ಟಿನಲ್ಲಿ, ಕೇಂದ್ರದ ತಾಳಕ್ಕೆ ಕುಣಿಯುತ್ತಾ, ರಾಜ್ಯದ ನೆಮ್ಮದಿ ಕಸಿಯುವ ಕೀಚಕ ಸರ್ಕಾರವನ್ನು ಜನರು ಕಿತ್ತೊಗೆಯುವುದು ಸೂರ್ಯ–ಚಂದ್ರರಷ್ಟೇ ಸತ್ಯ ಎಂದು ಹೇಳಿತ್ತು. ಇದಕ್ಕೆ ಪ್ರತಿಕ್ರಿಯಿಸಿದ್ದ ಬಿಜೆಪಿ ನಾಯಕ ಸಿ.ಟಿ.ರವಿ, ನಮಗೆ ಕುಮಾರಸ್ವಾಮಿಯವರಷ್ಟು ಸಾಮರ್ಥ್ಯವಿಲ್ಲ ಎಂದು ನಾವು ಮೊದಲೇ ಒಪ್ಪಿಕೊಂಡಿದ್ದೇವೆ. ನಮ್ಮದು ಮನೆಯೊಳಗಿನ ಸಾಮರ್ಥ್ಯ, ಅವರದ್ದು ಮನೆ ಊರು ದಾಟಿದ ಸಾಮರ್ಥ್ಯ. ನಮಗೆ ಅವರಷ್ಟು ಸಾಮರ್ಥ್ಯವಿಲ್ಲ.

ಅವರು ವೈಯಕ್ತಿಕವಾಗಿ ಹೇಳಿದ್ದಾರೋ, ರಾಜಕೀಯವಾಗಿ ಹೇಳಿದ್ದಾರೋ ಗೊತ್ತಿಲ್ಲ, ರಾಜಕೀಯವಾಗಿ ಹೇಳಿದ್ದರೆ ಬಿಜೆಪಿ ತನ್ನ ಸಾಮರ್ಥ್ಯವನ್ನು ಸಾಬೀತುಪಡಿಸುತ್ತಲೇ ಬಂದಿದೆ ಎಂದು ಹೇಳಿದ್ದರು.

## ಪೊಲೀಸ್ ಕಾನ್ಸ್ ಟೇಬಲ್ ಆತ್ಮಹತ್ಯೆ

ಕಾರವಾರ: ಪೊಲೀಸ್ ಕಾನ್ಸ್ ಟೇಬಲ್ ಓರ್ವರು ಆತ್ಮಹತ್ಯೆಗೆ ಮಾಡಿಕೊಂಡಿರುವ ಘಟನೆ ಉತ್ತರ ಕನ್ನಡ ಜಿಲ್ಲೆಯ ಇಕೋ ಬೀಚ್ ಬಳಿ ನಡೆದಿದೆ.

ರಾಮ ನಾಗೇಶ್ (32) ಆತ್ಮಹತ್ಯೆಗೆ ಶರಣಾಗಿರುವ ಕಾನ್ಸ್ ಟೇಬಲ್. ಕುಮಟಾ ತಾಲೂಕಿನ ನಾಡುಮಾಸ್ಕೇರಿ ಮೂಲದ ರಾಮ ನಾಗೇಶ್, ಕುಂದಾಪುರ ಪೊಲೀಸ್ ಠಾಣೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದರು.

ಜೂಜು, ಆನ್ ಲೈನ್ ಆಟದಿಂದ ರಾಮ ನಾಗೇಶ್ ಸಾಲ ಮಾಡಿಕೊಂಡಿದ್ದರು ಎನ್ನಲಾಗಿದೆ. ಕಳೆದ ಕೆಲ ತಿಂಗಳಿಂದ ಕರ್ತವ್ಯಕ್ಕೂ ಹಾಜರಾಗದೆ ಗೈರಾಗಿದ್ದರು. ಇಂದು ಏಕಾಏಕಿ ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ತಿಳಿದುಬಂದಿದೆ. ಹೊನ್ನಾವರ ಪೊಲೀಸ್ ಠಾಣೆ ವ್ಯಾಪಿಯಲ್ಲಿ ಪ್ರಕರಣ ನಡೆದಿದೆ.

## ನಿಪ್ಪಾಣಿ–ಶಿರಗುಪ್ಪಿ–ಶೇಂಡೂರ ರಸ್ತೆಯ ಕಾಮಗಾರಿಗೆ ಸಚಿವೆ ಶಶಿಕಲಾ ಜೊಲ್ಲೆ ಚಾಲನೆ

ನಿಪ್ಪಾಣಿ: 'ಹಲವು ದಶಕಗಳಿಂದ ಅಭಿವೃದ್ಧಿ ಕಾಣದ ಶಿರಗುಪ್ಪಿ ಗ್ರಾಮದಲ್ಲಿ ಸರಣಿ ಕಾಮಗಾರಿಗಳ ಮೂಲಕ ಸರ್ವಾಂಗೀಣ ಅಭಿವೃದ್ಧಿ ಮಾಡಲಾಗುತ್ತಿದೆ.

ಪ್ರಸಕ್ತ ಅಧಿಕಾರಾವಧಿಯಲ್ಲಿ ರೂ.22 ಕೋಟಿಗಳ ಕಾಮಗಾರಿ ಮಾಡಿ ಗ್ರಾಮದ ಸರ್ವತೋಮುಖ ಬೆಳವಣಿಗೆಗೆ ಪ್ರಾಮಾಣಿಕ ಪ್ರಯತ್ನ ಮಾಡಿದ್ದೇನೆ' ಎಂದು ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವೆ ಶಶಿಕಲಾ ಜೊಲ್ಲೆ ಹೇಳಿದರು.

ತಾಲ್ಲೂಕಿನ ಶಿರಗುಪ್ಪಿ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆಯಿಂದ



ಮಂಜೂರಾದ ರೂ.2 ಕೋಟಿ ಅನುದಾನದಲ್ಲಿ ನಿಪ್ಪಾಣಿ–ಶಿರಗುಪ್ಪಿ–ಶೇಂಡೂರ 3 ಕಿ.ಮೀ. ಉದ್ದದ ರಸ್ತೆ ಡಾಂಬರೀಕರಣ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು. 'ನಿಪ್ಪಾಣಿ–ಶೇಂಡೂರ ಪ್ರಮುಖ ರಸ್ತೆಯ ಅಗಲವನ್ನು 12 ಅಡಿಗಳಿಂದ 18 ಅಡಿಗಳವರೆಗೆ ಹೆಚ್ಚಿಸಲಾಗಿದೆ.

ಇದರಿಂದ ನಗರಕ್ಕೆ ದಿನನಿತ್ಯ ತೆರಳುವ ಶಾಲಾ ವಿದ್ಯಾರ್ಥಿಗಳಿಗೆ ಮತ್ತು ಇತರೆ ವಾಹನಗಳಿಗೆ ಅನುಕೂಲವಾಗಲಿದೆ.

10 ವರ್ಷಗಳ ಅಧಿಕಾರಾವಧಿಯಲ್ಲಿ ಹಗಲಿರುಳು ಶ್ರಮಿಸಿ ಫಲಾನುಭವಿಗಳ ಮನೆಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳನ್ನು ತಲುಪಿಸಲಾಗಿದೆ' ಎಂದರು.

ಇದೇ ಸಂದರ್ಭದಲ್ಲಿ ಹಿರಿಯ ನಾಗರಿಕ ಫಲಾನುಭವಿಗಳಿಗೆ ವೃದ್ಧಾಪ ವೇತನದ ಆದೇಶ ಪ್ರತಿಗಳನ್ನು ಸಚಿವೆ ಜೊಲ್ಲೆ ವಿತರಿಸಿದರು. ಈ ಸಂದರ್ಭದಲ್ಲಿ ಸ್ಥಳೀಯ ನಗರಸಭೆ ಅಧ್ಯಕ್ಷ ಜಯವಂತ ಭಾಟಲೆ, ಸ್ಥಾಯಿ ಸಮಿತಿ ಚೇರ್ಮನ್ ರಾಜು ಗುಂದೇಶಾ, ಗುತ್ತಿಗೆದಾರ ಅನಿಲ ಬೆನ್ನಳ್ಳಿ, ರಾಜು ಕುಂಭಾರ, ಪ್ರಕಾಶ ಕುಂಭಾರ, ಮಲ್ಲಪ್ಪ ನಾಯಿಕ, ಪಂಕಜ ದೇಸಾಯಿ, ರಮೇಶ ಚವಾಣ, ಸಂಜಯ ಕುಂಭಾರ, ಸಂಭಾಜಿ ಚವಾಣ, ಗೀತಾ ಚವಾಣ, ಮಾಧುರಿ ಬುವಾ ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

# ಕಲಿಕಾ ಸಮಾಗ್ರಿಗಳ ಮೂಲಕ ಬೋಧನಾ ವಿಧಾನವು ವಿದ್ಯಾರ್ಥಿಗಳಲ್ಲಿ ಸ್ಪೂರ್ತಿ ಕುತೂಹಲ ಹೆಚ್ಚಿಸಲು ಸಹಕಾರಿ

ಬೆಳಗಾವಿ: ವಿಜ್ಞಾನವು ವಿದ್ಯಾರ್ಥಿಗಳಲ್ಲಿ ಸಮಸ್ಯೆ ಪರಿಹಾರಕ್ಕೆ ಸಹಾಯ ಮಾಡುವಲ್ಲಿ, ತಾರ್ಕಿಕತೆ, ಸೃಜನ ಶೀಲತೆಯನ್ನು ಅಭಿವೃದ್ಧಿ ಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಸಾಂಪ್ರದಾಯಿಕ ಪದ್ಧತಿಯಿಂದ ಅಥವಾ ಕೇವಲ ಬೋಧನಾ ವಿಧಾನದಿಂದ ವಿಜ್ಞಾನವನನ್ನು ಬೋಧಿಸುವುದರಿಂದ ವಿದ್ಯಾರ್ಥಿಗಳಲ್ಲಿ ನಿರೀಕ್ಷಿತ ಮಟ್ಟದ ಯಶಸ್ಸನ್ನು ಕಂಡುಕೊಳ್ಳಲು ಸಾಧ್ಯವಾಗುವುದಿಲ್ಲಾ, ಯಾವುದೇ ವೈಜ್ಞಾನಿಕ ಪ್ರಕ್ರಿಯೆಯ ಪರಿಕಲ್ಪನೆಯನ್ನು ಸುಲಭವಾಗಿ ಅರ್ಥಮಾಡಿಸಿಕೊಳ್ಳಲು ಶಿಕ್ಷಕರಿಗೆ ಬೋಧನಾ ಸಾಮಗ್ರಿಗಳು ಬಹಳ ಉಪಯೋಗಕ್ಕೆ ಬರುತ್ತದೆ ಎಂದು ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಕಾರ್ಯದರ್ಶಿ ಹಾಗೂ ಬೆಳಗಾವಿ ವಿಭಾಗದ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ವಾಲ್ಟರ್ ಹೆಚ್. ಡಿ'ಮೆಲ್ಲೊ ಅವರು ತಿಳಿಸಿದರು.

ಸ್ಥಳೀಯ ಸೇವಕ ಸಂಸ್ಥೆ, ಭಾರತ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ರಾಷ್ಟ್ರೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂವಹನ ಪರಿಷತ್ತು ಇವರ ಸಹಯೋಗದೊಂದಿಗೆ ಮಹಾಂತೇಶ ನಗರದ ಮಹಾಂತ ಭವನದಲ್ಲಿ ವಿಜ್ಞಾನ ಶಿಕ್ಷಕರು ಹಾಗೂ ಶಿಕ್ಷಣ ಪ್ರಶಿಕ್ಷಕರುಗಳಿಗೆ ಆಯೋಜಿಸಿದ್ದ ಮೂರು ದಿನಗಳ "ಕಡಿಮೆ ವೆಚ್ಚದ ಶಿಕ್ಷಣ ಸಾಮಾಗ್ರಿಗಳ ತಯಾರಿಕೆ ಮೂಲಕ ವಿಜ್ಞಾನ ಸಂವಹನ ಕಾರ್ಯಾಗಾರ" ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಜ್ಞಾನ ಶಿಕ್ಷಣಕ್ಕೆ ದುಬಾರಿ ಬೋಧನಾ ಸಾಮಾಗ್ರಿಗಳ ಆವಶ್ಯಕತೆ ಇಲ್ಲದೇ ಸ್ಥಳೀಯವಾಗಿ ದೊರಕುವ ವಸ್ತುಗಳಿಂದಲೇ ಶಿಕ್ಷಣ ಪರಿಕರಗಳನ್ನು ತಯಾರಿಸಿ ಪರಿಣಾಮಕಾರಿಯಾಗಿ ವಿಜ್ಞಾನವನ್ನು ಬೋಧಿಸಲು ಸಾಧ್ಯವಾಗುವುದು. ಇದರಿಂದ ವಿದ್ಯಾರ್ಥಿಗಳಿಗೆ ಹಾಗೂ ವಿಶೇಷವಾಗಿ ಗ್ರಾಮೀಣ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಸಾಂಪ್ರದಾಯಿಕ ಬೋಧನೆ ಹಾಗೂ ಕಲಿಕಾ ವಿಧಾನಗಳು ನವೀನ, ಸೃಜನಶೀಲ ಹಾಗೂ




ಸಮರ್ಥ ಶಿಕ್ಷಣ ವಿಧಾನಗಳಿಗೆ ವೇಗವಾಗಿ ದಾರಿ ಮಾಡಿಕೊಡುತ್ತಿವೆ.

ಕೇವಲ ಸೀಮೆ ಸುಣ್ಣದೊಂದಿಗೆ ಸಾಂಪ್ರದಾಯಿಕ ಬೋಧನಾ ಪದ್ಧತಿ ಸಂಪೂರ್ಣವಾಗಿ ಅನಗತ್ಯವಲ್ಲದಿದ್ದರೂ, ಸಮಕಾಲೀನ ಶೈಕ್ಷಣಿಕ ದೃಷ್ಠಿಯಲ್ಲಿ ಅಸಮರ್ಪಕವೆಂದು ಪರಿಗಣಿಸಲ್ಪಡುತ್ತಿದೆ. ಬೋಧನೆ–ಕಲಿಕೆ ಪ್ರಕ್ರಿಯೆಗಳನ್ನು ಹೆಚ್ಚು ಆಸಕ್ತಿಕರ ಮತ್ತು ಪರಿಣಾಮಕಾರಿಯಾಗಿ ಮಾಡಲು ವಿಶ್ವಾದಾದ್ಯಂತ ಶಿಕ್ಷಕರು ಹೊಸ ಬೋಧನಾ ಸಾಧನಗಳನ್ನು ಆವಿಷ್ಕರಿಸುತ್ತಿದ್ದಾರೆ.

ಕಲಿಕಾ ಪರಿಸರವು ಉತ್ತೇಜಕ ಮತ್ತು ಸಕ್ರಿಯವಾಗಿದ್ದಾಗ ಕಲಿಕೆ ನಡೆಯುತ್ತದೆ. ಶಿಕ್ಷಣ ಪದ್ಧತಿಯಲ್ಲಿ ಕಲಿಕಾ ಸಾಮಗ್ರಿಗಳನ್ನು ತಯಾರಿಸುವುದು ಮತ್ತು ಬಳಸುವುದು ಬೋಧನೆಯ ಪ್ರಮುಖ ಭಾಗವಾಗಿರುವುದರಿಂದ ಶಿಕ್ಷಣ ಸಾಮಾಗ್ರಿಗಳ ತಯಾರಿಕೆ ಮೂಲಕ ವಿಜ್ಞಾನ ಸಂವಹನ ಕಾರ್ಯಾಗಾರದ ಪ್ರಯೋಜನ ಪಡೆಯಬೇಕು ಎಂದು ಕರೆ ನೀಡಿದರು.

ಮುಖ್ಯ ಅಥಿತಿಗಳಾಗಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತಿನ ಸದಸ್ಯರಾದ ಡಾ. ಎಸ್. ಬಿ. ಸೋಮಣ್ಣವರ ಇವರು ತಮ್ಮ ಭೊದನಾ ವೃತ್ತಿಯ ಅನುಭವಗಳನ್ನು ಹಂಚಿಕೊಂಡು ಶಿಕ್ಷಣದಲ್ಲಿ ಸೃಜನಶೀಲ ಬೋಧನಾ ಕ್ರಮ ಹಾಗೂ ಗುರುವಿನ ಮಹತ್ವವನ್ನು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಡಾ. ನಿರ್ಮಲಾ ಬಟ್ಟಲ ಅವರು ಒಬ್ಬ ಶಿಕ್ಷಕ ಒಳ್ಳೆಯ ಪಾಠಕ್ಕಿಂತ ಪರಿಣಾಮಕಾರಿ ಪಾಠ ಮಾಡುವಂತಿರಬೇಕು ಅಲ್ಲದೇ ಈಗಿನ ಪರಿಸರದಲ್ಲಿ ಶಿಕ್ಷಕ ಭೋದಕನಾಗಿರದೆ ಫೆಸಿಲಿಟೇಟರ್‌ನಾಗಿರಬೇಕು. ಈ ನಿಟ್ಟಿನಲ್ಲಿ ಶಾಲಾ ಶಿಕ್ಷಕರಿಗೆ ಮತ್ತು ಶಿಕ್ಷಣ ಪ್ರಶಿಕ್ಷಕರಿಗೆ ಸೇವಕ ಸಂಸ್ಥೆಯು ಹಮ್ಮಿಕೊಳ್ಳುವ ಇಂತಹ ಕಾರ್ಯಕ್ರಮಗಳು ಪರಿಣಾಮಕಾರಿಯಾಗಿವೆ ಎಂದು ಶ್ಲಾಘಿಸಿದರು.

ಸೇವಕ ಸಂಸ್ಥೆಯ ಕಾರ್ಯದರ್ಶಿ ಹಾಗೂ ಪ್ರಧಾನ ಪರಿವೀಕ್ಷಕರಾದ ಆನಂದ ಲೋಬೊ ಇವರು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಉದ್ದೇಶಗಳು, ಸಂಸ್ಥೆಯ ಕಾರ್ಯಚಟುವಟಿಕೆಗಳು ಹಾಗೂ ಕಾರ್ಯಾಗಾರ ವಿವರ ನೀಡಿದರು. ಕಾರ್ಯಕ್ರಮದಲ್ಲಿ ಸೇವಕ ಸಂಸ್ಥೆಯ ಸದಸ್ಯೆ ಹಾಗೂ ನ್ಯಾಯವಾದಿ ಪ್ರತಿಮಾ ಜೋಶಿ, ರಾಣಿ ಚನ್ನಮ್ಮಾ ವಿಶ್ವ ವಿದ್ಯಾಲಯದ ಶೈಕ್ಷಣಿಕ ಪರಿಷತ್ತಿನ ಸದಸ್ಯ ಭರ್ಮಾ ಗುಂಡುಕೇರಿ, ಸೇವಕ ಸಂಸ್ಥೆಯ ಸಿಬಂದಿಗಲು, ಪದಾಧಿಕಾರಿಗಳು, ವಿವಿಧ ಶಿಕ್ಷಣ ಸಂಸ್ಥೆಗಳ ಬೋಧಕರು ಹಾಗೂ ಶಿಕ್ಷಣ ಪ್ರಶಿಕ್ಷಕರು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089